ಸಂಪುಟ : 8 ಸಂಚಿಕೆ : 167 ಪುಟ : 4 ಬೆಲೆ : 3.00 ಶನಿವಾರ ಆಗಸ್ಟ್ 05, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 167 Pages : 4 Price : 3.00 Saturday August 05, 2023 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2023-25



ಗದಗ ಜಿಲ್ಲಾ ಉಪವಿಭಾಗಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿದ ಡಾ. ವೆಂಕಟೇಶ್ ನಾಯಕ್ ಅವರನ್ನು ಸಾಮಾಜಿಕ ಕಾರ್ಯಕರ್ತ ಸೈಯದ್ ಖಾಲಿದ್ ಕೊಪ್ಪಳ ಭೇಟಿಯಾಗಿ ಶುಭ ಕೋರಿದರು.

## ಉದ್ಯಾನವನದಲ್ಲಿ ಉದಯರಾಗ, ಸಂಧ್ಯಾರಾಗ ಕಾರ್ಯಕ್ರಮ

**■ ವಿಜಯಸಾಕ್ಷಿ ಸುದ್ದಿ, ಗದಗ**

ಉದ್ಯಾನವನದಲ್ಲಿ ಉದಯ ರಾಗ ಹಾಗೂ ಸಂಧ್ಯಾರಾಗ ಕಾರ್ಯಕ್ರಮದಲ್ಲಿ, ಆಗಸ್ಟ್ 6 ರಂದು ರವಿವಾರ ಬೆಳಿಗ್ಗೆ:6.30 ರಿಂದ 7.30 ರವರೆಗೆ ನಡೆಯುವ ಉದಯರಾಗ ಕಾರ್ಯಕ್ರಮದಲ್ಲಿ ರಾಜೀವಗಾಂಧಿ ನಗರದ ಶಿವಶರಣ ಶ್ರೀ ಹರಳಯ್ಯ ಉದ್ಯಾನವನದಲ್ಲಿ ಶ್ಯಾಮರಾವ್ ಪುಲಾರಿ ರವರಿಂದ "ಸುಗಮ ಸಂಗೀತ" ವಿಶ್ವೇಶ್ವರಯ್ಯ ನಗರದ ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಶರಣಯ್ಯ ಶಾಸ್ತ್ರೀಗಳು ಹಿರೇಮಠ ಇವರಿಂದ "ಸುಗಮ ಸಂಗೀತ" ಸಾಯಂಕಾಲ: 5.30 ರಿಂದ 6.30 ಗಂಟೆಯವರೆಗೆ ಭೀಷ್ಮಕೆರೆಯ ಬಸವೇಶ್ವರ ಪುತ್ಥಳಿ ಆವರಣದಲ್ಲಿ ನಡೆಯುವ ಸಂಧ್ಯಾರಾಗ ಕಾರ್ಯಕ್ರಮದಲ್ಲಿ ಶ್ರೀನಿವಾಸ ಕುಲಕರ್ಣಿ ಇವರಿಂದ "ಗಾಯನ" ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಕರ್ನಾಟಕ ಸರ್ಕಾರ, ಗದಗ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಹಾಗೂ ತಾರಾಲಯ ಸೊಸೈಟಿ (ರಿ) ವತಿಯಿಂದ ಗದಗ ಬೆಟಗೇರಿ ಅವಳಿ ನಗರದಲ್ಲಿ ಸ್ಥಾಪಿಸಲಾಗಿರುವ 3ಡಿ ಡಿಜಿಟಲ್ ತಾರಾಲಯ ಮತ್ತು ಉಪ-ಪ್ರಾದೇಶಿಕ ವಿಜ್ಞಾನ ಕೇಂದ್ರಕ್ಕೆ ಅಗತ್ಯವಿರುವ 4 ಹುದ್ದೆಗಳನ್ನು (ಮೇಲ್ವಿಚಾರಕರು-1, ಶಿಕ್ಷಣ ಸಹಾಯಕರು-1, ತಾಂತ್ರಿಕ ಸಹಾಯಕರು-1, ತಂತ್ರಜ್ಞರು-1 ) ಸರ್ಕಾರದ ಗುತ್ತಿಗೆ ನಿಯಮಾವಳಿಗಳನ್ವಯ ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಜಿಲ್ಲಾಧಿಕಾರಿಗಳ ಕಾರ್ಯಾಲಯ ಗದಗ ವೆಬ್‌ಸೈಟ್ gadag.nic.in ನಲ್ಲಿ ಹಾಗೂ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಿದ ಅರ್ಜಿ ನಮೂನೆಯನ್ನು ಪಡೆದು ಅರ್ಜಿಯೊಂದಿಗೆ ಬಯೋಡೆಟಾ, ಶೈಕ್ಷಣಿಕ ಹಾಗೂ ಅನುಭವ ಪ್ರಮಾಣ ಪತ್ರಗಳ ನಕಲು ಪ್ರತಿಗಳನ್ನು ದೃಢೀಕರಣದೊಂದಿಗೆ ಆಗಸ್ಟ್ 19 ರಂದು ಸಂಜೆ 5 ಗಂಟೆಯೊಳಗಾಗಿ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಕೊಠಡಿ ಸಂಖ್ಯೆ 123, 1ನೇ ಮಹಡಿ, ಜಿಲ್ಲಾಧಿಕಾರಿಗಳ ಕಾರ್ಯಾಲಯ ಗದಗ ಇಲ್ಲಿಗೆ ಸಲ್ಲಿಸಲು ಗದಗ ಜಿಲ್ಲಾಧಿಕಾರಿಗಳು ಹಾಗೂ ಗದಗ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರ ಮತ್ತು ತಾರಾಲಯ ಸೊಸೈಟಿ (ರಿ) ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎನ್‌ವ್ಹಿಹೆಚ್‌ಸಿಪಿ ಕಾರ್ಯಕ್ರಮದ ಪೂರ್ವಭಾವಿ ಸಭೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಷ್ಟ್ರೀಯ ಹೆಪಟೈಟಿಸ್ ಕಾರ್ಯಕ್ರಮದ (National Viral Hepatitis Control Programme ) ಅಡಿಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ಅಧ್ಯಕ್ಷತೆಯಲ್ಲಿ ಗುರುವಾರದಂದು ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಎನ್.ವಿ.ಹಚ್.ಸಿ.ಪಿ. ಕಾರ್ಯಕ್ರಮದ ಪೂರ್ವಭಾವಿ ಸಭೆ ಜರುಗಿತು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಗದೀಶ ನುಚ್ಚಿನ, ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಡಾ.ವೆಂಕಟೇಶ ರಾಠೋಡ, ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ತಾಲೂಕಾ ಆರೋಗ್ಯಾಧಿಕಾರಿಗಳು, ಸಂಯೋಜಕರು ಹಾಗೂ ಮೇಲ್ವಿಚಾರಕರು ಹಾಜರಿದ್ದರು.

ಸಭೆಯಲ್ಲಿ ರಾಷ್ಟ್ರೀಯ ಹೆಪಟೈಟಿಸ್ ಕಾರ್ಯಕ್ರಮದ ಕುರಿತು ಹ್ಯಾಂಡಬಿಲ್ಸ್, ಪೋಸ್ಟರ್ಸ್ ಮತ್ತು ಬ್ಯಾನರ್ ಗಳನ್ನು ಬಿಡುಗಡೆ ಗೊಳಿಸಲಾಯಿತು.

## ರೈತ ಬಾಂಧವರ ಗಮನಕ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

2023-24ನೇ ಸಾಲಿನಲ್ಲಿ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ( RWBCIS) ಬೆಳೆ ವಿಮಾ ಯೋಜನೆಯನ್ನು ಗದಗ ಜಿಲ್ಲೆಯಲ್ಲಿ ಅನುಷ್ಟಾನಗೊಳಿಸಲು ಸರ್ಕಾರದ ಆದೇಶದಲ್ಲಿ ಅಧಿಸೂಚನೆ ಹೊರಡಿಸಲಾಗಿದೆ.

ಬೆಳೆ ಸಾಲ ಪಡೆಯುವ ಮತ್ತು ಬೆಳೆ ಸಾಲ ಪಡೆಯದ ದಾಳಿಂಬೆ, ಪಪ್ಪಾಯಿ, ದ್ರಾಕ್ಷಿ ಹಾಗೂ ಮಾವು ಬೆಳೆಗಳನ್ನು ಬೆಳೆದ ರೈತರು ವಿಮಾ ಕಂತನ್ನು ಪಾವತಿಸಲು ಆಗಸ್ಟ್ 7 ರವರೆಗೆ ವಿಸ್ತರಿಸಲಾಗಿದೆ. ಆಸಕ್ತ ರೈತರು ಸಂಬಂಧಿತ ಬ್ಯಾಂಕ್‌ಗಳ ಮೂಲಕ ಹಾಗೂ ಬೆಳೆ ಸಾಲ ಪಡೆಯದ ರೈತರು ಸಾಮಾನ್ಯ ಸೇವಾ ಕೇಂದ್ರಗಳ ( Common Service Centre ) - CSC ಮೂಲಕ ಕೂಡಾ ಈ ಯೋಜನೆಯಡಿ ನೋಂದಾಯಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತೋಟಗಾರಿಕೆ ಕಚೇರಿ ಅಥವಾ ರೈತ ಸಂಪರ್ಕ ಕೇಂದ್ರದ ಅಧಿಕಾರಗಳನ್ನು ಸಂಪರ್ಕಿಸಿ ಹೆಚ್ಚಿನ ಮಾಹಿತಿಯನ್ನು ಪಡೆಯಬಹುದಾಗಿದೆಯೆಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಸಹಕಾರ ಇಲಾಖೆ ಪ್ರಧಾನ ಕಾರ್ಯದರ್ಶಿ ಎನ್.ಮಂಜುನಾಥ ಪ್ರಸಾದರಿಂದ ಪ್ರಗತಿ ಪರಿಶೀಲನಾ ಸಭೆ

# ಸರ್ಕಾರದ ಸೌಲಭ್ಯ ದೊರಕಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸಹಕಾರಿ ಸಂಸ್ಥೆಗಳಿಗೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವದರ ಮೂಲಕ ಅರ್ಹ ಫಲಾನುಭವಿಗಳಿಗೆ ಸರ್ಕಾರದ ಸೌಲಭ್ಯ ದೊರಕಿಸಲು ಪ್ರಾಮಾಣಿಕ ಪ್ರಯತ್ನ ಮಾಡುವಂತೆ ಸಹಕಾರ ಇಲಾಖೆ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಎನ್ ಮಂಜುನಾಥ ಪ್ರಸಾದ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಜರುಗಿದ ಸಹಕಾರ ಸಂಘಗಳ ಉಪನಿಬಂಧಕರು, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಹಾಗೂ ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರೊಂದಿಗೆ ಜರುಗಿದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



> ಪ್ರಸಕ್ತ ಸಾಲಿನ ಆಯ-ವ್ಯಯದಲ್ಲಿ 30 ಲಕ್ಷಕ್ಕೂ ಅಧಿಕ ರೈತರಿಗೆ ಅಂದಾಜು 25 ಸಾವಿರ ಕೋಟಿ ರೂ ಸಾಲ ವಿತರಣೆಗೆ ಗುರಿ, ಶೂನ್ಯ ಬಡ್ಡಿದರದಲ್ಲಿ ನೀಡಲಾಗುವ ಅಲ್ಪಾವಧಿ ಸಾಲದ ಮಿತಿಯನ್ನು 5 ಲಕ್ಷ ರೂಗಳಿಗೆ ಹೆಚ್ಚಳ ಹಾಗೂ ಶೇ.3ರ ಬಡ್ಡಿದರದಲ್ಲಿ ಮಧ್ಯಮಾವಧಿ ಹಾಗೂ ದೀರ್ಘಾವಧಿ ಸಾಲದ ಮಿತಿಯನ್ನು 10 ಲಕ್ಷ ರೂಗಳಿಂದ 15 ಲಕ್ಷ ರೂ.ಗಳಿಗೆ ಹೆಚ್ಚಿಸಲಾಗಿದೆ. ಈ ನಿಟ್ಟಿನಲ್ಲಿ ಸಹಕಾರಿ ಸಂಘಗಳು ಈ ಯೋಜನೆಯ ಅನುಷ್ಠಾನಕ್ಕಾಗಿ ಅಗತ್ಯದ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು.
>
> **- ಎನ್ ಮಂಜುನಾಥ ಪ್ರಸಾದ.**
> ಸಹಕಾರ ಇಲಾಖೆಯ ಕಾರ್ಯದರ್ಶಿಗಳು.



ಜಿಲ್ಲೆಯಲ್ಲಿ ಕ್ರೀಡೆಗಳ ಉತ್ತೇಜನಕ್ಕಾಗಿ ಅವಶ್ಯವಿರುವ ಮೂಲಸೌಲಭ್ಯಗಳ ಕುರಿತು ಮಾಹಿತಿ ಪಡೆದ ಕಾರ್ಯದರ್ಶಿಗಳು, ಕ್ರೀಡಾ ರಂಗದಲ್ಲಿ ಜಿಲ್ಲೆಗೆ ಬೇಕಾದ ಅಗತ್ಯದ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಅಗತ್ಯ ಸಹಕಾರ ನೀಡಲಾಗುವದು ಎಂದು ತಿಳಿಸಿ, ಜಿಲ್ಲೆಯಲ್ಲಿ ನಿರ್ಮಿಸಲು ಉದ್ದೇಶಿಸಲಾಗಿರುವ ಸ್ಕೈಕ್ಲಿಂಗ್ ಮೈದಾನದ ನಿರ್ಮಾಣಕ್ಕೆ ಅಗತ್ಯದ ಪ್ರಸ್ತಾವನೆ ಸಲ್ಲಿಸಲು ಸೂಚಿಸಿದರು.

ಸಹಕಾರ ಇಲಾಖೆಯು ಕರ್ನಾಟಕ ಸರ್ಕಾರದ ಪ್ರಮುಖ ಇಲಾಖೆಯಾಗಿದೆ. ಇಲಾಖೆಯು ಸಾಮಾಜಿಕ, ಆರ್ಥಿಕ ಯೋಜನೆಗಳು ಮತ್ತು ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದ ವಿವಿಧ ಇಲಾಖೆಗಳೊಂದಿಗೆ ನಿಕಟ ಸಹಕಾರ ಮತ್ತು ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದರು.

ಕೃಷಿ ಪತ್ತಿನ ಸಹಕಾರಿ ಸಂಘಗಳನ್ನು ಗಣಕೀಕೃತಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ ಎಲ್ಲ ಸಂಘಗಳಿಗೂ ಅಗತ್ಯ ಗಣಕ ಯಂತ್ರ, ಸಂಬಂಧಿಸಿದ ತಂತ್ರಾಂಶಗಳನ್ನು ಒದಗಿಸಲಾಗುವುದು. ಈ ಕುರಿತು ಸಿಬ್ಬಂದಿಗಳಿಗೆ ಈಗಾಗಲೇ ತರಬೇತಿಯನ್ನು ನೀಡಲಾಗುತ್ತಿದೆ. ಜಿಲ್ಲೆಯ ಎಲ್ಲ ಸ್ವಸಹಾಯ ಸಂಘಗಳನ್ನು ಗಣಕೀಕೃತಗೊಳಿಸುವದರ ಜೊತೆಗೆ, ಸಂಘದ ಪ್ರತಿಯೊಬ್ಬ ಸದಸ್ಯರ ಮಾಹಿತಿಯನ್ನು ಈ ತಂತ್ರಾಂಶದಲ್ಲಿ ದಾಖಲಿಸಬೇಕು. ಅಲ್ಲದೇ ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಒಂದು ಕೃಷಿ ಪತ್ತಿನ ಸಹಕಾರ ಸಂಘಗಳನ್ನು ತೆರೆಯಲು ಕ್ರಮ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ನಿರ್ಮಾಣವಾದ ಉಗ್ರಾಣಗಳ ಸಮರ್ಪಕ ಬಳಕೆಯಾಗುವಂತೆ ನಿಗಾವಹಿಸಬೇಕು ಎಂದರು.

ಸಭೆಯಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್, ಸಹಕಾರ ಸಂಘಗಳ ಉಪನಿಬಂಧಕರಾದ ಸುಖದೇವಿ, ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿ, ಡಿಸಿಸಿ ಬ್ಯಾಂಕ್ ವ್ಯವಸ್ಥಾಪಕ ನಿರ್ದೇಶಕರು ಹಾಜರಿದ್ದರು.

### ಸಿಪಿಐ ಡಿ ಜಿ ಸುಬ್ಬಾಪೂರಮಠರ ನೇತೃತ್ವದಲ್ಲಿ ಸುಗಮ ಸಂಚಾರಕ್ಕೆ ಕ್ರಮ

# ಅಧಿಕಾರಿಗಳ ಕರ್ತವ್ಯ ದಕ್ಷತೆಗೆ ಮೆಚ್ಚುಗೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಅವಳಿ ನಗರಗಳಲ್ಲಿಯೇ ಅತಿ ಜನದಟ್ಟಣೆಯಿರುವ ನಗರದ ಹಾತಲಗೇರಿ ನಾಕಾದಲ್ಲಿನ ಸುಗಮ ಸಂಚಾರಕ್ಕೆ ಬೆಟಗೇರಿ ಬಡಾವಣೆಯ ಸಿಪಿಐ ಡಿ ಜಿ ಸುಬ್ಬಾಪೂರಮಠ ಅವಿರತವಾಗಿ ಶ್ರಮಿಸುವ ಮೂಲಕ ರಸ್ತೆ ಅಪಘಾತ ಮುಕ್ತವಾಗಿಸುವಲ್ಲಿ ದಕ್ಷತೆಯಿಂದ ಕಾರ್ಯ ನಿರ್ವಹಿಸುತ್ತಿರುವುದು ಇಲ್ಲಿನ ನಾಗರಿಕರ ಮೆಚ್ಚುಗೆಗೆ ಪಾತ್ರವಾಗಿದೆ.



ಇವರ ಕರ್ತವ್ಯ ದಕ್ಷತೆಗಾಗಿ ಇಲ್ಲಿನ ನಾಗರಿಕರು ಹರ್ಷ ವ್ಯಕ್ತಪಡಿಸುತ್ತಿದ್ದಾರೆಂದು ನಗರಸಭೆಯ ಮಾಜಿ ಸದಸ್ಯ ಸಂಜಯ ಸಿಂದಿಗೇರಿ ಅಭಿಪ್ರಾಯಪಟ್ಟಿದ್ದಾರೆ. ರಾಜೀವಗಾಂಧಿ ನಗರದ ಹಾತಲಗೇರಿ ನಾಕಾದಲ್ಲಿ ಹೆಸರಾಂತ ಶಾಲಾ-ಕಾಲೇಜುಗಳು, ಆಸ್ಪತ್ರೆಗಳು ಹಾಗೂ ದೇವಸ್ಥಾನಗಳಿಗೆ ಪ್ರತಿದಿನ ಸಾವಿರಾರು ಜನರು ತೆರಳುತ್ತಾರೆ. ಹಾತಲಗೇರಿ ನಾಲ್ಕು ರಸ್ತೆ ಜನಸಂದಣಿಯಿಂದ ಇಲ್ಲಿ ಸುಗಮ ಸಂಚಾರಕ್ಕೆ ತೊಂದರೆಯಾಗುತ್ತಿತ್ತು. ಇದನ್ನು ಗಮನಿಸಿದ ಬೆಟಗೇರಿ ಬಡಾವಣೆಯ ಸಿಪಿಐ ಸುಬ್ಬಾಪೂರಮಠ ನೇತೃತ್ವದ ಪೊಲೀಸ್ ತಂಡ ದಕ್ಷತೆಯಿಂದ ಸುಗಮ ಸಂಚಾರ ಕಲ್ಪಿಸುವಲ್ಲಿ ಕಾರ್ಯ ನಿರ್ವಹಿಸುತ್ತ, ರಸ್ತೆ ಅಪಘಾತವನ್ನು ತಡೆಯುವಲ್ಲಿ ಕ್ರಮ ವಹಿಸಿದ್ದಾರೆ.

ಕೇವಲ ವೇತನಕ್ಕಾಗಿ ಸೇವೆ ಸಲ್ಲಿಸದೇ, ತಮ್ಮ ಕರ್ತವ್ಯವನ್ನರಿತು ಸ್ವತಃ ನಾಕಾದಲ್ಲಿದ್ದುಕೊಂಡು ಕಾರ್ಯೋನ್ಮುಖರಾದ ಡಿ ಜಿ ಸುಬ್ಬಾಪೂರಮಠ ನೇತೃತ್ವದ ತಂಡ ಇತರರಿಗೂ ಮಾದರಿಯಾಗಿದೆ. ಈ ಭಾಗದಲ್ಲಿ ವಯೋವೃದ್ಧರು, ಹಿರಿಯ ನಾಗರಿಕರು, ಶಾಲಾ ಮಕ್ಕಳು, ಮಹಿಳೆಯರು ಸೇರಿದಂತೆ ಏಕಕಾಲಕ್ಕೆ ನಾಕಾದ ನಾಲ್ಕೂ ದಿಕ್ಕಿನಿಂದ ನೂರಾರು ಜನರು ತೆರಳುತ್ತಾರೆ. ಭಾರೀ ಟ್ರಾಫಿಕ್ ಇರುವ ಹಾತಲಗೇರಿ ನಾಕಾದಲ್ಲಿ ಯಾವುದೇ ಸಂಚಾರ ಸಮಸ್ಯೆ ಉದ್ಭವಿಸದಂತೆ ಸೇವೆ ಸಲ್ಲಿಸುತ್ತಿರುವ ಸಿಪಿಐ ಡಿ ಜಿ ಸುಬ್ಬಾರಮಠರ ಕಾರ್ಯಕ್ಕೆ ಸಂಜಯ ಸಿಂದಿಗೇರಿ ಹೆಮ್ಮೆ ವ್ಯಕ್ತಪಡಿಸಿದ್ದಾರೆ.

## ಜಿಲ್ಲಾ ಕ್ರೀಡಾಂಗಣಕ್ಕೆ ಭೇಟಿ ನೀಡಿದ ಎನ್.ಮಂಜುನಾಥ ಪ್ರಸಾದ

**■ ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಸಹಕಾರ ಇಲಾಖೆಯ ಕಾರ್ಯದರ್ಶಿಗಳಾದ ಎನ್. ಮಂಜುನಾಥ ಪ್ರಸಾದ ಅವರು ನಗರದಲ್ಲಿನ ಕೆ ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣಕ್ಕೆ ಶುಕ್ರವಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ನಿರ್ಮಾಣವಾದ ಸಿಂಥಟಿಕ್ ಟ್ರ್ಯಾಕ್ ಪರಿಶೀಲಿಸಿದ ಅವರು, ಕ್ರೀಡಾಂಗಣದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಕಾರ್ಯಗಳ ಬಗ್ಗೆ ಮಾಹಿತಿ ಪಡೆದು, ಬಾಕಿ ಉಳಿದ ಅಭಿವೃದ್ಧಿ ಕಾಮಗಾರಿಗಳಿಗಾಗಿ ಬೇಕಾದ ಅನುದಾನದ ಕುರಿತು ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು. ನಂತರ,



ಕ್ರೀಡಾಂಗಣದಲ್ಲಿನ ವಸತಿ ಶಾಲೆಯ ಪಾಕಶಾಲೆಗೆ ಭೇಟಿ ನೀಡಿ, ಕ್ರೀಡಾ ವಿದ್ಯಾರ್ಥಿಗಳಿಗೆ ಒದಗಿಸಲಾಗುವ ಅಡುಗೆಯ ರುಚಿ ಸವಿದು, ಸರ್ಕಾರದ ಮಾರ್ಗಸೂಚಿಗಳನ್ವಯ ವಿಧ್ಯಾರ್ಥಿಗಳಿಗೆ ಊಟ, ತಿಂಡಿ ಒದಗಿಸಲು ತಿಳಿಸಿದರು.

ಈ ಸಂದರ್ಭದಲ್ಲಿ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ ಸೇರಿದಂತೆ ಕ್ರೀಡಾ ಇಲಾಖೆ ತರಬೇತುದಾರರು, ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಮಧು ಕೆ ಎನ್‌ರಿಗೆ ಡಾಕ್ಟರೇಟ್ ಪದವಿ ಪ್ರದಾನ

**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ತಾಂತ್ರಿಕ ರಸಾಯನಶಾಸ್ತ್ರ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿರುವ ಮಧು ಕೆ ಎನ್ ಇವರು 'ಅಸೆಸ್ಮೆಂಟ್ ಆಫ್ ಕ್ವಾಲಿಟಿ ಆಫ್ ವಾಟರ್ ಆ್ಯಂಡ್ ಸಾಯಿಲ್ ಬೈ ಅನಾಲಿಟಿಕಲ್ ಟೆಕ್ನಿಕ್ ಆ್ಯಂಡ್ ಅಡ್ವಾನ್ಸ್ ಟೆಕ್ನಿಕಲ್ ಟೂಲ್ಸ್ ಇನ್ ಆ್ಯಂಡ್ ಅರೌಂಡ್ ಕೊಪ್ಪಳ ಸಿಟಿ, ಕರ್ನಾಟಕ ಸ್ಟೇಟ್, ಇಂಡಿಯಾ' ಕುರಿತು ಮಂಡಿಸಿದ ಮಹಾ ಪ್ರಬಂಧಕ್ಕೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿಯಲ್ಲಿ ಜರುಗಿದ 23ನೇ ವಾರ್ಷಿಕ ಘಟಿಕೋತ್ಸವ



ಸಮಾರಂಭದಲ್ಲಿ ಡಾಕ್ಟರೇಟ್ ಆಫ್ ಫಿಲಾಸಫಿ ನೀಡಿ ಗೌರವಿಸಿದೆ.

ಮಧು ಕೆ ಎನ್ ಇವರಿಗೆ ಶಿಕ್ಷಣ ಮತ್ತು ಸಂಶೋಧನಾ ಕ್ಷೇತ್ರದಲ್ಲಿ ಹಲವಾರು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಪ್ರಶಸ್ತಿಗಳಿಗೆ ಭಾಜನರಾಗಿರುವ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಸಿವ್ಹಿಲ್ ಇಂಜಿನಿಯರಿಂಗ್ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾದ ಡಾ.ಕೆ ಲೋಕೇಶರವರು ಮಾರ್ಗದರ್ಶನ ಮಾಡಿದ್ದರು. ಇವರ ಸಾಧನೆಗೆ ಕಾಲೇಜಿನ ಆಡಳಿತ ಮಂಡಳಿ, ಪ್ರಾಚಾರ್ಯರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

## ಆತಂಕವಾದಿಗಳ ವಿರುದ್ಧ ಕ್ರಮಕ್ಕೆ ಒತ್ತಾಯ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಹಿಂದೂ ಸಮಾಜದ ಮೇಲೆ ದಾಳಿ ನಡೆಸಿ ಅಟ್ಟಹಾಸ ಮೆರೆಯುತ್ತಿರುವ ಇಸ್ಲಾಮಿಕ್ ಜಿಹಾದ್ ಆತಂಕವಾದದ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಶುಕ್ರವಾರ ಶಿರಹಟ್ಟಿಯಲ್ಲಿ ವಿಶ್ವಹಿಂದೂ ಪರಿಷತ್ ಹಾಗೂ ಭಜರಂಗದಳದ ವತಿಯಿಂದ ತಹಸೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ವಿಎಚ್‌ಪಿಯ ಸುರೇಶ ಅಕ್ಕಿ, ಭಜರಂಗದಳದ ಸಂಚಾಲಕ ವೀರಣ್ಣ ಅಂಗಡಿ, ಪ್ರತಿ ವರ್ಷ ಭಜರಂಗದಳದ ವತಿಯಿಂದ ಹರಿಯಾಣದ ಮೇವಾತ್‌ನಲ್ಲಿ ಯನುಹನಲ್ಲಿ ಧಾರ್ಮಿಕ ಬ್ರಿಜ್ ಮಂಡಲಯಾತ್ರೆಯನ್ನು ಆಚರಿಸಲಾಗುತ್ತದೆ. ಹಿಂದೂಗಳ ಶ್ರದ್ಧಾಕೇಂದ್ರವಾಗಿದ್ದ ಪಾಂಡವರ ಕಾಲದ ಪ್ರಾಚೀನ ಕಾಲದ




ನಲ್ಲಡ ಶಿವಮಂದಿರದ ಧಾರ್ಮಿಕ ಯಾತ್ರೆಯ ಮೇಲೆ ಇಸ್ಲಾಮಿಕ್ ಜಿಹಾದಿಗಳಿಂದ ಭಾರೀ ಪ್ರಮಾಣದಲ್ಲಿ ಕಲ್ಲು ತೂರಾಟ, ಹಿಂಸಾಚಾರ ನಡೆದಿದೆ. ಸುತ್ತಲಿನ ಪರ್ವತದಿಂದ ಗುಂಡಿನ ಸುರಿಮಳೆಯೂ ಆಗಿದೆ. ಇದರಿಂದ ಅನೇಕರು ಗಾಯಗೊಂಡಿದ್ದು, ನೂರಾರು ವಾಹನಗಳು ಬೆಂಕಿಗಾಹುತಿಯಾಗಿವೆ. ಭಜರಂಗದಳ ಕಾರ್ಯಕರ್ತರು ಮತ್ತು ಅನೇಕ ತೀರ್ಥಯಾತ್ರಿಕರು ಗಾಯಗೊಂಡಿದ್ದಾರೆ. ಇಂತವರ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳಬೇಕೆಂದು ಮನವಿ ಮೂಲಕ ಆಗ್ರಹಿಸಿದರು.

ಪರಶುರಾಮ ಡೊಂಕಬಳ್ಳಿ, ಈರಣ್ಣ ಅಂಗಡಿ, ಗೂಳಪ್ಪ ಕರಿಗಾರ, ಯಲ್ಲಪ್ಪ ಇಂಗಳಗಿ, ಮಲ್ಲು ಕುದರಿ, ಪ್ರವೀಣ ಛಬ್ಬಿ, ಸಿದ್ದು ಗುಗ್ಗರಿ, ಶರಣ ಉಹೊಸೂರ, ಸುನೀಲ ಹೊಳಲ, ಶಿವರಾಜ್ ಆಡಿನ, ಕಲ್ಲಪ್ಪ ಈಳಗೇರ, ಈರಪ್ಪ ಕಲ್ಯಾಣಿ ಮುಂತಾದವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಸೂಕ್ತ ಬಸ್ ವ್ಯವಸ್ಥೆಗಾಗಿ ಪೊಲೀಸ್ ಠಾಣೆಯ ಮೆಟ್ಟಿಲೇರಿದ ವಿದ್ಯಾರ್ಥಿಗಳು

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶಾಲಾ-ಕಾಲೇಜು ವೇಳೆ ಬಸ್ಸಿನ ವ್ಯವಸ್ಥೆ ಕಲ್ಪಿಸುವಂತೆ ತಾಲೂಕಿನ ಹರದಗಟ್ಟಿ ಗ್ರಾಮದ ವಿದ್ಯಾರ್ಥಿಗಳು ಶುಕ್ರವಾರ ಪಟ್ಟಣದ ಪೊಲೀಸ್ ಠಾಣೆಯ ಮೆಟ್ಟಿಲೇರಿದ ಘಟನೆ ಜರುಗಿದೆ.

ಪ್ರಸಕ್ತ ಶೈಕ್ಷಣಿಕ ವರ್ಷದ ಪ್ರಾರಂಭದಿಂದಲೂ ತಮ್ಮ ಗ್ರಾಮಕ್ಕೆ ಸಮರ್ಪಕ ಬಸ್ಸಿನ ವ್ಯವಸ್ಥೆಯಿಲ್ಲ. ಇದರಿಂದ ಸರಿಯಾದ ಸಮಯಕ್ಕೆ ಶಾಲೆ-ಕಾಲೇಜಿಗೆ ಹೋಗಲಾಗುತ್ತಿಲ್ಲ ಎಂದು ನಾಲ್ಕೈದು ಬಾರಿ ಮನವಿ ಮಾಡಲಾಗಿದೆ. ಮಂಗಳವಾರವೂ ವಿದ್ಯಾರ್ಥಿಗಳು ರಸ್ತೆಯಲ್ಲಿ ಬಸ್‌ಗಳನ್ನು ತಡೆದು ಆಕ್ರೋಶ ವ್ಯಕ್ತಪಸಿ ಪ್ರತಿಭಟನೆ ನಡೆಸಿದ್ದರು. ಆದರೆ ಯಾವುದೇ ಸ್ಪಂದನೆ ಸಿಕ್ಕಿಲ್ಲ. ನೀವಾದರೂ ಬಸ್ಸಿನ ವ್ಯವಸ್ಥೆ ಕಲ್ಪಿಸಲು ಸಹಕರಿಸಿ ಎಂದು ಪಿಎಸ್‌ಐ



ಯೂಸೆಫ್ ಜಮೂಲಾ ಅವರಲ್ಲಿ ಮನವಿ ಮಾಡಿದರು.

ಗ್ರಾಮದ ಮುಖಂಡ ರಮೇಶ ಲಮಾಣಿ ಮಾತನಾಡಿ, ಗ್ರಾಮದಲ್ಲಿ ಬಸ್ಸಿನ ಸಮಸ್ಯೆ ಇಂದು ನಿನ್ನೆಯದಲ್ಲ. ಬಸ್ ಅವ್ಯವಸ್ಥೆಯಿಂದ ವಿದ್ಯಾರ್ಥಿಗಳ ಅಭ್ಯಾಸದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದೆ. ಹಲವಾರು ಬಾರಿ ಸಾರಿಗೆ ಘಟಕಕ್ಕೆ ಮನವಿ ಸಲ್ಲಿಸಿದರೂ ಪ್ರಯೋಜನವಾಗಿಲ್ಲ. ಇನ್ನು ಮೇಲಾದರೂ ಶಾಲಾ ಪ್ರಾರಂಭ ಮತ್ತು ಬಿಡುವ ಸಮಯಕ್ಕೆ ಬಸ್ಸಿನ ಸೌಲಭ್ಯ ಕಲ್ಪಿಸದಿದ್ದರೆ ವಿದ್ಯಾರ್ಥಿಗಳೊಂದಿಗೆ ಸೇರಿ ಗ್ರಾಮಸ್ಥರು ರಸ್ತೆ ತಡೆ ಮಾಡಿ ಹೋರಾಟ ಮಾಡಬೇಕಾಗುತ್ತದೆ ಎಂದು ಹೇಳಿದರು.

ಪಿಎಸ್‌ಐ ಯೂಸೆಫ್ ಜಮೂಲಾ ವಿದ್ಯಾರ್ಥಿಗಳನ್ನು ಸಮಾಧಾನಪಡಿಸಿ, ಸಂಬಂಧಿಸಿದ ಸಾರಿಗೆ ಘಟಕದ ಅಧಿಕಾರಿಗಳೊಂದಿಗೆ ಮಾತನಾಡಿ ವ್ಯವಸ್ಥೆ ಸರಿಪಡಿಸುವಂತೆ ಸೂಚಿಸುವದಾಗಿ ಭರವಸೆ ನೀಡಿದರು.

## ಸಾಕ್ಷಿ ಸುಭಾಷಿತ

**ನೂರು ಮಂದಿ ಸ್ನೇಹಿತರಿದ್ದರೂ ಅದು ಕಡಿಮೆಯೇ, ಆದರೆ ಒಬ್ಬನೇ ಒಬ್ಬ ಶತ್ರುವಿದ್ದರೂ ಬಹಳಷ್ಟು ಶತ್ರುಗಳಿದ್ದಂತೆ.**

**–ಶೇಕ್ಸ್‌ಪಿಯರ್**

## ಸಂಪಾದಕೀಯ

### ಕೆಟ್ಟ ಪದ ಬಳಕೆಗೆ ಎರಡು ವರ್ಷ ಶಿಕ್ಷೆ ಒಪ್ಪುವ ಮಾತಲ್ಲ

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಟೀಕೆ ಮಾಡಿ ಮಾನನಷ್ಟ ಪ್ರಕರಣದಲ್ಲಿ ಶಿಕ್ಷೆಗೆ ಒಳಗಾಗಿದ್ದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರಿಗೆ ಸುಪ್ರೀಂ ಕೋರ್ಟ್ ತಡೆ ನೀಡುವ ಮೂಲಕ ಮಹತ್ವದ ಹೆಜ್ಜೆ ಇಟ್ಟಿದೆ.

2019 ರಲ್ಲಿ ಸೂರತ್ ಕೋರ್ಟ್ ರಾಹುಲ್ ಗಾಂಧಿ ಅವರಿಗೆ ಎರಡು ವರ್ಷ ಜೈಲು ಶಿಕ್ಷೆ ವಿಧಿಸಿತ್ತು. ಶಿಕ್ಷೆ ಪ್ರಕಟವಾದ ಬೆನ್ನಲ್ಲೇ ಸಂಸದನ ಸ್ಥಾನದಿಂದ ಅನರ್ಹಗೊಳಿಸಲಾಗಿತ್ತು. ಜೊತೆಗೆ ಸಂಸದರಿಗೆ ನೀಡಲಾಗಿದ್ದ ಸರ್ಕಾರಿ ಬಂಗಲೆಯನ್ನು ವಾಪಸ್ ಪಡೆಯಲಾಗಿತ್ತು.

ಈ ಒಂದು ಸಂಗತಿ ದೇಶದ ಗಮನ ಸೆಳೆದಿತ್ತು. ಆಡಳಿತ ಮತ್ತು ಪ್ರತಿಪಕ್ಷಗಳ ಆರೋಪ ಪ್ರತ್ಯಾರೋಪದ ಜೊತೆಗೆ ಮಾನನಷ್ಟ ಪ್ರಕರಣವೊಂದರಲ್ಲಿ ಗರಿಷ್ಠ ಶಿಕ್ಷೆ ನೀಡಿದ್ದು ತೀವ್ರ ಚರ್ಚೆ ಮತ್ತು ಅನುಮಾನಕ್ಕೂ ಕಾರಣವಾಗಿತ್ತು. ಸೂರತ್ ಕೋರ್ಟ್‌ನ ಆದೇಶವನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಹೈಕೋರ್ಟ್ ಮೆಟ್ಟಿಲೇರಿದ್ದರು ಸಹ ತೀರ್ಪಿನಲ್ಲಿ ಯಾವುದೇ ಬದಲಾವಣೆ ಆಗಿದ್ದಿಲ್ಲ. ಅಂತಿಮವಾಗಿ ಸುಪ್ರೀಂ ಕೋರ್ಟ್ ಕದ ತಟ್ಟಿದ ರಾಹುಲ್ ಗಾಂಧಿಗೆ ತುಸು ನಿರಾಳತೆ ಸಿಕ್ಕಿದೆ. ಸುಪ್ರೀಂ ಕೋರ್ಟಿನ ಮಧ್ಯಂತರ ತಡೆಯಿಂದ ರಾಹುಲ್ ಗಾಂಧಿಗೆ ಸಂಸದ ಸ್ಥಾನ ಮತ್ತೆ ಸಿಗಲಿದೆ. ಜೊತೆಗೆ 2024ರ ಲೋಕಸಭೆ ಚುನಾವಣೆಯಲ್ಲಿ ಸ್ಪರ್ಧಿಸುವ ಅವಕಾಶವು ಸಿಗುವುದು ಸ್ಪಷ್ಟವಾಗುತ್ತಿದೆ. ಸುಪ್ರೀಂ ಕೋರ್ಟಿನ ಈ ಮಧ್ಯಂತರ ತಡೆಯಿಂದ ಕಾಂಗ್ರೆಸ್ ವಲಯದಲ್ಲಿ ಸಂಚಲನ ಸೃಷ್ಟಿಯಾಗಿದೆ. ಸತ್ಯಕ್ಕೆ ಸಿಕ್ಕ ಜಯ ಎಂದು ಕಾಂಗ್ರೆಸ್ ನಾಯಕರು ಮಾಧ್ಯಮಗಳ ಮುಂದೆ ಸಂತಸವನ್ನು ವ್ಯಕ್ತಪಡಿಸುತ್ತಿದ್ದಾರೆ.

ಸುಪ್ರೀಂ ಕೋರ್ಟ್ ಮಧ್ಯಂತರ ತಡೆ ನೀಡಲು ಉಲ್ಲೇಖಿಸಿರುವ ಕಾರಣಗಳು ಚಿಂತನೆಗೆ ಹಚ್ಚಿವೆ. ಸೂರತ್ ಕೋರ್ಟ್ ಗರಿಷ್ಠ ಶಿಕ್ಷೆ ವಿಧಿಸಲು ಯಾವುದೇ ಸಕಾರಣವನ್ನ ನೀಡಿಲ್ಲ. ಅಂತಿಮ ತೀರ್ಪಿನವರೆಗೆ ಅಪರಾಧ ನಿರ್ಣಯದ ಆದೇಶವನ್ನು ತಡೆಹಿಡಿಯಬೇಕಾಗಿದೆ. ಅದಾಗಿಯೂ ಕಾಂಗ್ರೆಸ್ ನಾಯಕ ಬಳಸಿರುವ ಭಾಷೆ ಉತ್ತಮ ಅಭಿವೃದ್ಧಿಯಿಂದ ಕೂಡಿಲ್ಲ ಎಂದು ತ್ರಿ ಸದಸ್ಯ ಪೀಠ ಅಭಿಪ್ರಾಯ ಪಟ್ಟಿದೆ. ಸುಪ್ರೀಂ ಕೋರ್ಟ್ ತ್ರಿ ಸದಸ್ಯ ಪೀಠದ ಅಭಿಪ್ರಾಯ ಎಲ್ಲರೂ ಒಪ್ಪುವಂಥದ್ದೆ. ಯಾವುದೇ ಪಕ್ಷಪಾತವಿಲ್ಲದೇ ಸುಪ್ರಿಂಕೋರ್ಟ್ ತನ್ನ ಅಭಿಪ್ರಾಯ ದಾಖಲಿಸಿದೆ. ಆದಷ್ಟು ಬೇಗ ಸುಪ್ರೀಂಕೋರ್ಟ್ ಈ ಪ್ರಕರಣದ ವಿಚಾರಣೆ ನಡೆಸಿ ತೀರ್ಪು ನೀಡಬೇಕು.

## ಎಸ್‌ಸಿ /ಎಸ್‌ಟಿ ಅನುದಾನವನ್ನು ಇತರ ಉದ್ದೇಶಕ್ಕೆ ಬಳಸಲ್ಲ: ಸರ್ಕಾರ ಸ್ಪಷ್ಟನೆ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸರ್ಕಾರ ಯಾವುದೇ ರೀತಿಯಲ್ಲೂ ಪರಿಶಿಷ್ಟ ಜಾತಿ/ಪಂಗಡಗಳ ಕಲ್ಯಾಣಕ್ಕೆ ಎಂದು ಮೀಸಲಿರಿಸಿದ ಹಣವನ್ನು ಇತರ ಜನ ಸಮುದಾಯಗಳ, ಇತರ ಉದ್ದೇಶಗಳಿಗೆ ಬಳಸುವುದಿಲ್ಲ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ.

ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಮುಖ್ಯಮಂತ್ರಿಗಳು, ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಲ್ಲಿನ ಅನುದಾನಗಳನ್ನು ಇತರ ಉದ್ದೇಶಕ್ಕೆ ಬಳಸಲಾಗುತ್ತಿದೆ ಎಂದು ಕೆಲವರು ದಿಕ್ಕು ತಪ್ಪಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಕೆಲವು ಮಾಧ್ಯಮಗಳಲ್ಲೂ ಈ ಕುರಿತು ವರದಿಗಳಿವೆ. ಪರಿಶಿಷ್ಟ ಜಾತಿ/ಪಂಗಡಗಳಿಗೆ ಮೀಸಲಿರಿಸಿದ ಅನುದಾನಗಳನ್ನು ಇತರ ಉದ್ದೇಶಗಳಿಗೆ ಬಳಸಲು ಅವಕಾಶ ನೀಡುತ್ತಿದ್ದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ)ಯನ್ನು ರದ್ದುಮಾಡಲು ಈಗಾಗಲೇ ತೀರ್ಮಾನ ಮಾಡಲಾಗಿದೆ ಎಂದು ಹೇಳಿದ್ದಾರೆ.

ಬಜೆಟ್‌ನಲ್ಲೂ ಈ ಬಗ್ಗೆ ಘೋಷಿಸಲಾಗಿದೆ. ಇದರ ಪರಿಣಾಮವಾಗಿ ಈ ಕೆಳಗಿನ ಇಲಾಖೆಗಳಿಗೆ ಅನುದಾನ ಹಂಚಿಕೆಯನ್ನು ಕಡಿತಗೊಳಿಸಿದ್ದು, ಅದನ್ನು ಈ ಬಾರಿ ಫಲಾನುಭವಿ ಆಧಾರಿತ ಕಾರ್ಯಕ್ರಮಗಳಿಗೆ ಹಂಚಿಕೆ ಮಾಡಲಾಗಿದೆ. ಸೆಕ್ಷನ್ 7(ಡಿ) ಅಡಿಯಲ್ಲಿದ್ದ ಕಾರಣಕ್ಕೆ ಸಾವಿರಾರು ಕೋಟಿ ರೂಪಾಯಿಗಳನ್ನು ರಸ್ತೆ, ಸೇತುವೆಗಳಿಗೆ ಬಳಸಲು ಅವಕಾಶವಿತ್ತು. ಇದರಿಂದ ಪರಿಶಿಷ್ಟ ಸಮುದಾಯಗಳಿಗೆ ಆಗುತ್ತಿದ್ದ ಸಮಸ್ಯೆಯನ್ನು ನಮ್ಮ ಸರ್ಕಾರ ನಿಲ್ಲಿಸಿದೆ ಎಂದು ತಿಳಿಸಿದ್ದಾರೆ.

## ತ್ವರಿತಗತಿಯಲ್ಲಿ ನೇರ ನಗದು ವರ್ಗಾವಣೆ: ಹೊಸ ಪಡಿತರ ಚೀಟಿ ವಿತರಣೆಗೆ ಕ್ರಮ: ಸಚಿವ ಕೆ.ಹೆಚ್. ಮುನಿಯಪ್ಪ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ ಹಾಗೂ ಆದ್ಯತಾ ಪಡಿತರ ಚೀಟಿಯ ಫಲಾನುಭವಿಗಳಿಗೆ ತ್ವರಿತಗತಿಯಲ್ಲಿ ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದು ಆಹಾರ ಸಚಿವ ಕೆ. ಹೆಚ್. ಮುನಿಯಪ್ಪ ತಿಳಿಸಿದ್ದಾರೆ.

ನಗರದಲ್ಲಿಂದು ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ 1.28 ಕೋಟಿ ಪಡಿತರ ಚೀಟಿ ಕುಟುಂಬಗಳಲ್ಲಿ ಈವರೆಗೂ 1 ಕೋಟಿ ಕುಟುಂಬಗಳಿಗೆ ರೂ. 566 ಕೋಟಿ ಹಣವನ್ನು ಕುಟುಂಬದ ಮುಖ್ಯಸ್ಥರ ಖಾತೆಗೆ ವರ್ಗಾವಣೆ ಮಾಡಲಾಗಿದೆ. ಇದರಿಂದ 3.50 ಕೋಟಿ ಫಲಾನುಭವಿಗಳಿಗೆ ಅನುಕೂಲವಾಗಿದೆ ಎಂದರು.

ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಅಕ್ಕಿ ನೀಡಲು ನಿರಾಕರಿಸಿದ ಹಿನ್ನೆಲೆಯಲ್ಲಿ 5 ಕೆ.ಜಿ. ಆಹಾರ ಧಾನ್ಯಗಳ ಬದಲಾಗಿ ಅರ್ಹ ಫಲಾನುಭವಿಗಳಿಗೆ ಪ್ರತಿ ಕೆ.ಜಿಗೆ ಎಫ್ ಸಿಐ ನಿಗಧಿಪಡಿಸಿದ ರೂ. 34ರಂತೆ ಪ್ರತಿ ಫಲಾನುಭವಿಗೆ ರೂ.170 ನೇರ ನಗದು ವರ್ಗಾವಣೆ ಮೂಲಕ ಕುಟುಂಬದ ಮುಖ್ಯಸ್ಥರ ಖಾತೆಗೆ ಜಮಾ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.


## ನೀವೂ ನಮ್ಮ ಜೊತೆ ಕೈಜೋಡಿಸಿ

**‘ವಿಜಯಸಾಕ್ಷಿ’**

**ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.**

**ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..**

**ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.**


**E-mail: vijayasakshidaily@gmail.com**

**ಮೊ : 9019256545**


**ಪುಸ್ತಕ ಪರಿಚಯ**

### ಸಾಹಿತಿ ಎಂ ವ್ಹಿ ಯಾಳಗಿಯವರ ಸಂಸ್ಮರಣ ಗ್ರಂಥದ ಪರಿಚಯ

# ಇತಿಹಾಸ, ಸಾಹಿತ್ಯದ ಸಂಗಮ ‘ಮಹಾಲಿಂಗ’




ಸಂಪಾದಕರು: ಪ್ರೊ. ಆರ್ ಎಲ್ ಪೊಲೀಸ್‌ಪಾಟೀಲ
ಪ್ರಕಾಶಕರು: ಶರಣ ಎಚ್ ಎಸ್ ಪಾಟೀಲ ಪ್ರತಿಷ್ಠಾನ, ಪ್ರಕಾಶಗೌಡ ಪಾಟೀಲ ಮುಂಡರಗಿ.
ಪುಟಗಳು: 369, ಬೆಲೆ: 300ರೂ.
ಮುದ್ರಣ: ತ್ವರಿತ ಮುದ್ರಣ, ಗದಗ.

ನಿವೃತ್ತ ಪ್ರಾಧ್ಯಾಪಕ ಆರ್ ಎಲ್ ಪೊಲೀಸ್‌ಪಾಟೀಲರ ಸಂಪಾದಕತ್ವದಲ್ಲಿ ಮೂಡಿಬಂದಿರುವ ಕೃತಿ ‘ಮಹಾಲಿಂಗ’, ಇತಿಹಾಸ, ಸಾಹಿತ್ಯದ ವಿದ್ಯಾರ್ಥಿಗಳ ಅಧ್ಯಯನಕ್ಕೆ ಪೂರಕ ಪಠ್ಯದಂತಿದೆ. ಮುಂಡರಗಿ ಭಾಗದಲ್ಲಿ ತಮ್ಮ ಸಾಹಿತ್ಯ ಮತ್ತು ಇತಿಹಾಸ ಪ್ರಜ್ಞೆಯ ಮೂಲಕ ಬಾಳಿ ಬೆಳಗಿದ ಶಿಕ್ಷಕ–ಸಾಹಿತಿ ಮಹಾಲಿಂಗ ಯಾಳಗಿಯವರನ್ನು ಕುರಿತ ಅಭಿನಂದನ ಗ್ರಂಥವು ಕೇವಲ ಯಾಳಗಿಯವರ ವ್ಯಕ್ತಿತ್ವವನ್ನು ವೈಭವೀಕರಿಸುವುದಕ್ಕೆ ಸೀಮಿತವಾಗದೆ, ಓದುಗನ ನೆತ್ತಿಯ ಬುತ್ತಿಯನ್ನು ಹಲವು ವಿಧಗಳಲ್ಲಿ ತಣಿಸುವಲ್ಲಿ ಸಫಲವಾಗಿದೆ.

ಮಹಾಲಿಂಗ ಯಾಳಗಿಯವರು ಶಿಕ್ಷಕರಾಗಿ ಮುಂಡರಗಿಯಲ್ಲಿ ಸಲ್ಲಿಸಿದ ಸೇವೆ, ಸಾಹಿತಿಗಳ ಒಡನಾಟ, ಸ್ವತಃ ಸಾಹಿತ್ಯ ಕೃಷಿ ಮಾಡುವುದರೊಂದಿಗೆ ಮುಂಡರಗಿಯಲ್ಲಿ ಸಾಹಿತ್ಯದ ಬೆಳೆಯನ್ನು ಬೆಳೆಯುವಲ್ಲಿ ಸಫಲರಾದ ಕಥೆಯನ್ನು ವಿವರಿಸುವಲ್ಲಿ ಈ ಕೃತಿ ಸಫಲವಾಗಿದೆ. ಧಾರವಾಡದಿಂದ ಕೊಪ್ಪಳಕ್ಕೆ, ಕೊಪ್ಪಳದಿಂದ ಬಂದು ಮುಂಡರಗಿಯಲ್ಲಿ ನೆಲೆನಿಂತು, ಮುಂಡರಗಿಯಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸಿರುವ ಮಹಾಲಿಂಗ ಯಾಳಗಿಯವರು ಶಿಷ್ಯರ ಮೆಚ್ಚಿನ ಶಿಕ್ಷಕರಾಗಿ, ಸಮಾಜ ಸುಧಾರಕರಾಗಿ, ಶ್ರೀಮಠದ ಸೇವಕರಾಗಿ, ಹಲವು ಪತ್ರಿಕೆಗಳ ಸಂಪಾದಕರಾಗಿ, ನಾಡಿನ ನಿಯತಕಾಲಿಕೆಗಳಿಗೆ ಬರಹಗಾರರಾಗಿ, ಸಂಯುಕ್ತ ಕರ್ನಾಟಕ, ಪ್ರಜಾವಾಣಿ ಪತ್ರಿಕೆಗಳ ವರದಿಗಾರರಾಗಿ, ಸಾಹಿತಿಗಳನ್ನು ಪ್ರೋತ್ಸಾಹಿಸುವ ಹಿರಿಯಣ್ಣನಾಗಿ, ವೈವಿಧ್ಯಮಯ ಪಾತ್ರಗಳಲ್ಲಿ ತಮ್ಮನ್ನು ತೊಡಗಿಸಿಕೊಂಡು ಎಲ್ಲದಕ್ಕೂ ಸಮರ್ಪಕ ನ್ಯಾಯ ಒದಗಿಸಿದ ಮಹಾನ್ ವ್ಯಕ್ತಿಯೆಂಬುದನ್ನು ಪುಸ್ತಕವು ತೆರೆದಿಡುತ್ತದೆ.

ಮೊದಲ ಭಾಗವು ಯಾಳಗಿಯವರು ವಿವಿಧ ಕಾರ್ಯಕ್ರಮಗಳಲ್ಲಿ ಗಣ್ಯರೊಂದಿಗೆ ಪಾಲ್ಗೊಂಡಿರುವ ಚಿತ್ರ ಸೌರಭವವನ್ನು ಒಳಗೊಂಡಿದ್ದರೆ, ಎರಡನೆ ಭಾಗವು ಕರುಳ ಬಳ್ಳಿಯ ಹೆಸರಿನಲ್ಲಿ ಅವರ ಪತ್ನಿ, ಸಂಬಂಧಿಕರು, ಮಕ್ಕಳು ಬರೆದಿರುವ ಲೇಖನಗಳನ್ನೊಳಗೊಂಡಿದೆ. ಯಾಳಗಿಯವರು ಈ ನಾಡು ಕಂಡ ಪ್ರಖ್ಯಾತ ಕಲಾವಿದ ಮುರಿಗೆಪ್ಪ ಚೆಟ್ಟಿಯವರ ಅಳಿಯಂದಿರು ಎಂಬುದು ವಿಶೇಷ. ಆರ್ಥಿಕ ಸಮಸ್ಯೆಯ ಹಿನ್ನೆಲೆಯಲ್ಲಿ ಹೊಸ ಪುಸ್ತಕ ಕೊಂಡು ತಂದಾಗ ಮನೆಯವರು ಬೈಯ್ದಾರು ಎಂಬ ಆತಂಕದಿಂದ ಅಲ್ಲಲ್ಲಿ ಮುಚ್ಚಿಟ್ಟಿರುವುದನ್ನು ಓದಿದಾಗ ಯಾಳಗಿಯವರ ಪುಸ್ತಕ ಪ್ರೀತಿಗೆ ತಲೆ ಬಾಗುತ್ತದೆ.

ಮೂರನೆ ಭಾಗದಲ್ಲಿ 28 ಜನ ಯಾಳಗಿಯವರ ಒಡನಾಡಿಗಳು, ಶಿಷ್ಯರು, ಸ್ನೇಹಿತರು ಯಾಳಗಿಯವರ ಜೊತೆಗಿನ ತಮ್ಮ ಒಡನಾಟವನ್ನು ಸ್ಮರಿಸಿಕೊಂಡಿದ್ದಾರೆ. ಅನೇಕ ಶಿಷ್ಯರು ಯಾಳಗಿಯವರಲ್ಲಿ ದೈವತ್ವನ್ನು ಕಂಡಿದ್ದರೆ, ಒಡನಾಡಿಗಳು, ಸ್ನೇಹಿತರನೇಕರು ಅವರಲ್ಲಿ ತಮ್ಮ ಮಾರ್ಗದರ್ಶಕನನ್ನು ಕಂಡಿದ್ದಾರೆ. ಶಿಷ್ಯ ಸಾಹಿತಿ ಎಚ್ ಎಸ್ ಪಾಟೀಲರ ಲೇಖನವು ಯಾಳಗಿಯವರ ಸಮಗ್ರ ಜೀವನವನ್ನು ತೆರೆದಿಡುವುದರಲ್ಲಿ ಸಫಲವಾಗಿದೆ.

ಈ ಎಲ್ಲ ಲೇಖನಗಳನ್ನು ಓದಿದದಾಗ ಮನುಷ್ಯ ಛಲದಿಂದ ಜೀವನದಲ್ಲಿ ಏನನ್ನಾದರೂ ಸಾಧಿಸಬಹುದು ಎಂಬುದು ತಿಳಿಯುತ್ತದೆ.

ಯಾಳಗಿಯವರು ಸುಮ್ಮನೆ ಸಂಬಳಕ್ಕಾಗಿ ಶಿಕ್ಷಕರಾದವರಲ್ಲ. ಕಾಟಾಚಾರಕ್ಕಾಗಿ ವಿಷಯ ಬೋಧಿಸಿದವರಲ್ಲ. ಹಾಗಾದರೆ ಅವರ ಶಿಕ್ಷಕ ವೃತ್ತಿ ಹೇಗಿತ್ತು ಎಂಬುದನ್ನು ತಿಳಿಯಲು ಈ ಕೃತಿಯನ್ನು ಓದಬೇಕು ಮತ್ತು ಶಿಕ್ಷಕರಾದವರು ಅದನ್ನು ಅನುಸರಿಸಲು ಪ್ರಯತ್ನಿಸಬೇಕು. ಶಿಕ್ಷಕ ವೃತ್ತಿಯೊಂದಿಗೆ ಸಾಹಿತ್ಯದ ಪ್ರೀತಿಯನ್ನೂ, ಸಾಹಿತಿಗಳ ನಂಟನ್ನೂ ಬೆಳೆಸಿಕೊಂಡಿದ್ದ ಯಾಳಗಿಯವರು ಮುಂಡರಗಿ ಭಾಗದಲ್ಲಿ ಸಾಹಿತ್ಯದ ಫಸಲನ್ನು ಹುಲುಸಾಗಿ ಬೆಳೆದರು. ಜಗದ್ಗುರು ಅನ್ನದಾನೀಶ್ವರ ಸಂಸ್ಥಾನ ಮಠದ ಈಗಿನ ಮತ್ತು ಹಿಂದಿನ ಶ್ರೀಗಳವರೊಂದಿಗೆ ಆತ್ಮೀಯ ಒಡನಾಟವನ್ನು ಇರಿಸಿಕೊಂಡು ತಮ್ಮ ಸಾಹಿತ್ಯದ ಕೃಷಿಯನ್ನು ವಿಪುಲಗೊಳಿಸಿಕೊಳ್ಳುವದರ ಜೊತೆಗೆ ಶ್ರೀಮಠದ ಸಾಹಿತ್ಯಕ್ಕೂ ತಮ್ಮದೇ ಆದ ಕಾಣಿಕೆಯನ್ನು ನೀಡಿದರು.

ನಾಲ್ಕನೆ ಭಾಗದಲ್ಲಿ ಯಾಳಗಿಯವರ ಸಾಹಿತ್ಯದ ಕೃತಿಗಳನ್ನು ಕುರಿತು ಆರು ಜನ ಅವಲೋಕನ ಮಾಡಿದ್ದಾರೆ. ಐದನೆ ಭಾಗದಲ್ಲಿ ಯಾಳಗಿಯವರ ಸಂಶೋಧನಾತ್ಮಕ ಕೃತಿಗಳ ಅವಲೋಕನವಿದೆ.

ಆರನೆ ಭಾಗ ಕಾವ್ಯ ಸೌರಭದಲ್ಲಿ, ಯಾಳಗಿಯವರ ಎರಡು ಕವನಗಳು ಮತ್ತು ಆಧುನಿಕ ವಚನಗಳಿದ್ದು, ಉಳಿದಂತೆ ಕೆಲವರು ಅವರನ್ನು ತಮ್ಮ ಕವನಗಳ ಮೂಲಕ ಸ್ಮರಿಸಿಕೊಂಡಿದ್ದಾರೆ. ಯಾಳಗಿಯವರ ಕವನ ‘ತಾಯ್ನುಡಿ ಹೊಡೆಯಲಿ ಜಯಭೇರಿ’ ನಾಡಿನ ಬಗೆಗಿನ ಅದಮ್ಯ ಪ್ರೀತಿಯನ್ನು ತೋರಿದರೆ, ಎರಡನೆ ಕವನ ‘ಮೊರೆ’ ಶ್ರೀ ಕೃಷ್ಣನನ್ನು ಕರೆಯುವ ಪರಿ ಅನನ್ಯವಾಗಿದ್ದು, ಅಂತರಾಳವನ್ನು ತಟ್ಟುತ್ತದೆ. ‘ಮಹಾಲಿಂಗ ಗುರು ಶ್ರೀ ಅನ್ನದಾನೀಶ್ವರ ಪ್ರಭು’ ಹೆಸರಿನಲ್ಲಿ ಅವರು ಬರೆದಿರುವ ವಚನಗಳು ಅಲ್ಲಲ್ಲಿ ಬಂಡಾಯದ ಧ್ವನಿಯನ್ನು ಧ್ವನಿಸುತ್ತವೆ. ಏಳನೆ ಭಾಗದಲ್ಲಿ ಅವರ ವೈಯಕ್ತಿಕ ವಿವರಗಳಿವೆ. ಕೃತಿಯನ್ನು ಓದಿ ಮುಗಿಸಿದಾಗ ಒಂದು ಧನ್ಯತೆಯ ಭಾವ ಮನಸ್ಸನ್ನು ಆಕ್ರಮಿಸಿಕೊಂಡು ಸಂಸ್ಮರಣ ಗ್ರಂಥದ ಸಂಪಾದಕ ಮಂಡಳಿಯವರ ಶ್ರಮವನ್ನು ಸಾರ್ಥಕಪಡಿಸುತ್ತದೆ.

**– ಅರುಣ ಬಿ ಕುಲಕರ್ಣಿ.**
ನರೇಗಲ್ಲ, ಕೋಡಿಕೊಪ್ಪ.

## ಮೋದಿ ಉಪನಾಮ ಪ್ರಕರಣ : ರಾಹುಲ್ ಗಾಂಧಿ ಶಿಕ್ಷೆಗೆ ತಡೆ ನೀಡಿದ ಸುಪ್ರೀಂ

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**



2019ರ ಲೋಕಸಭೆ ಚುನಾವಣೆ ಸಂದರ್ಭದಲ್ಲಿ ಕೋಲಾರದಲ್ಲಿ ಮಾಡಿದ ಭಾಷಣಕ್ಕೆ ಸಂಬಂಧಿಸಿದಂತೆ ಎರಡು ವರ್ಷಗಳ ಜೈಲು ಶಿಕ್ಷೆಗೆ ಗುರಿಯಾಗಿ ಸಂಸದ ಸ್ಥಾನದಿಂದಲೂ ಅನರ್ಹಗೊಂಡಿರುವ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರಿಗೆ ಗುಜರಾತ್ ಹೈಕೋರ್ಟ್ ನೀಡಿದ್ದ ಶಿಕ್ಷೆಗೆ ಸುಪ್ರೀಂ ಕೋರ್ಟ್ ಮಧ್ಯಂತರ ಆದೇಶದಲ್ಲಿ ತಡೆ ನೀಡಿದೆ.

ನ್ಯಾಯಮೂರ್ತಿಗಳಾದ ಬಿ ಆರ್ ಗವಾಯಿ, ಪಿಎಸ್ ನರಸಿಂಹ ಮತ್ತು ಸಂಜಯ್ ಕುಮಾರ್ ಅವರನ್ನೊಳಗೊಂಡ ಸುಪ್ರೀಂ ಕೋರ್ಟ್ ಪೀಠವು ಗುಜರಾತ್ ಹೈಕೋರ್ಟ್ ನೀಡಿದ್ದ ಶಿಕ್ಷೆಗೆ ಸುಪ್ರೀಂ ಕೋರ್ಟ್ ಮಧ್ಯಂತರ ಆದೇಶದಲ್ಲಿ ತಡೆ ನೀಡಿದೆ.

“ಅರ್ಜಿದಾರರ ಹೇಳಿಕೆಗಳು ಉತ್ತಮ ಅಭಿರುಚಿಯಲ್ಲಿಲ್ಲ ಎಂಬುದರಲ್ಲಿ ಸಂದೇಹವಿಲ್ಲ. ಅರ್ಜಿದಾರರು ಭಾಷಣ ಮಾಡುವಾಗ ಹೆಚ್ಚು ಜಾಗರೂಕರಾಗಿರಬೇಕು ಎಂದು ಎಂದು ಪೀಠವು ಹೇಳಿದೆ.

“ಅನರ್ಹತೆಯ ತೀರ್ಪುಗಳು ವ್ಯಕ್ತಿಯ ಹಕ್ಕಿನ ಮೇಲೆ ಮಾತ್ರವಲ್ಲದೆ ಮತದಾರರ ಮೇಲೂ ಪರಿಣಾಮ ಬೀರುತ್ತವೆ” ಎಂದು ನ್ಯಾಯಾಲಯ ತಿಳಿಸಿದೆ.

ತಮ್ಮ “ಮೋದಿ ಉಪನಾಮ” ಹೇಳಿಕೆಗೆ ಸಂಬಂಧಿಸಿದಂತೆ ಮಾನನಷ್ಟ ಮೊಕದ್ದಮೆಯ ಶಿಕ್ಷೆಗೆ ತಡೆಯಾಜ್ಞೆ ನೀಡುವಂತೆ ಕೋರಿ ಸಲ್ಲಿಸಿದ್ದ ಮನವಿಯನ್ನು ವಜಾಗೊಳಿಸಿದ ಗುಜರಾತ್ ಹೈಕೋರ್ಟ್ ತೀರ್ಪನ್ನು ಪ್ರಶ್ನಿಸಿ ರಾಹುಲ್ ಗಾಂಧಿ ಅವರು ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಿಚಾರಣೆ ನಡೆಸುತ್ತಿದೆ.

“ಎಲ್ಲ ಕಳ್ಳರು ಮೋದಿ ಹೆಸರಿನ ಸಾಮಾನ್ಯ ಉಪನಾಮವನ್ನು ಏಕೆ ಹೊಂದಿದ್ದಾರೆ? ಎಂದು ಏಪ್ರಿಲ್ 13, 2019 ರಂದು ಕರ್ನಾಟಕದ ಕೋಲಾರದಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಮಾಡಿದ ಭಾಷಣದ ವೇಳೆ ಪ್ರಸ್ತಾಪಿಸಿದ್ದರು.

ಈ ಹೇಳಿಕೆಯ ವಿರುದ್ಧ ಬಿಜೆಪಿ ನಾಯಕ ಪೂರ್ಣೇಶ್ ಮೋದಿ ರಾಹುಲ್ ಗಾಂಧಿಯವರ ವಿರುದ್ಧ ಕ್ರಿಮಿನಲ್ ಮಾನನಷ್ಟ ಮೊಕದ್ದಮೆ ದಾಖಲಿಸಿದ್ದರು.

## ಜೆಡಿಎಸ್ ಕಂಡರೆ ಕಾಂಗ್ರೆಸ್‌ಗೆ ಭಯವಿದೆ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



‘ರಾಜ್ಯದ ಇಂಟೆಲಿಜೆನ್ಸ್ ಹೇಗೆ ಕೆಲಸ ಮಾಡುತ್ತಿದೆ ಇಲ್ಲೇ ಗೊತ್ತಾಗುತ್ತದೆ’

ಕುಟುಂಬ ಸಮೇತ ಹೋಗಿದ್ದು ಯೂರೋಪ್‌ಗೆ ಹೊರತು ಸಿಂಗಾಪುರಕ್ಕಲ್ಲ

ನಮ್ಮ ರಾಜ್ಯದ ಇಂಟೆಲಿಜೆನ್ಸ್ ಹೇಗೆ ಕೆಲಸ ಮಾಡುತ್ತಿದೆ ಎಂದು ಇಲ್ಲೇ ಗೊತ್ತಾಗುತ್ತೆ. ನಾನು ಕುಟುಂಬ ಸಮೇತ ಯೂರೋಪ್ ಪ್ರವಾಸಕ್ಕೆ ಹೋಗಿದ್ದೆವು. ಅದನ್ನೇ ಕೆಲವರು ಸರ್ಕಾರ ಕೆಡವಲು ಸಿಂಗಾಪುರಕ್ಕೆ ಹೋಗಿದ್ದರು ಎಂದು ಬಿಂಬಿಸಿದರೆ ನಾವೇನು ಮಾಡೋಕೆ ಆಗುತ್ತದೆ ಎಂದು ಮಾಜಿ ಸಿಎಂ ಎಚ್ ಡಿ ಕುಮಾರಸ್ವಾಮಿ ಅವರು ಡಿಸಿಎಂ ಡಿಕೆ ಶಿವಕುಮಾರ್ ಅವರಿಗೆ ತಿರುಗೇಟು ನೀಡಿದರು.

ವಿದೇಶಿ ಪ್ರವಾಸ ಮುಗಿಸಿಕೊಂಡು ಬಂದಿರುವ ಕುಮಾರಸ್ವಾಮಿ ಗುರುವಾರ ತಡರಾತ್ರಿ ದೇವನಹಳ್ಳಿಯ ಕೆಂಪೇಗೌಡ ವಿಮಾನ ನಿಲ್ದಾಣಕ್ಕೆ ಬಂದಿಳಿದ ವೇಳೆ ಸುದ್ದಿಗಾರರ ಜೊತೆ ಮಾತನಾಡಿ, “ಜೆಡಿಎಸ್ ಪಕ್ಷ 19 ಸ್ಥಾನಗಳನ್ನು ಮಾತ್ರ ಗೆದ್ದಿದ್ದರೂ ಅವರಿಗೆ ನಮ್ಮ ಮೇಲೆ ಭಯ ಎಷ್ಟಿದೆ ಅನ್ನೋದು ಇದನ್ನು ನೋಡಿಯೇ ತಿಳಿಯುತ್ತದೆ” ಎಂದು ವ್ಯಂಗ್ಯವಾಡಿದರು.

“ಕಾಂಗ್ರೆಸ್ ಸರ್ಕಾರವನ್ನು ಕೆಡವಲು ಕೆಲವರು ಸಿಂಗಾಪುರಕ್ಕೆ ಹೋಗಿ ಬಿಜೆಪಿ ಜೊತೆಗೆ ಷಡ್ಯಂತ್ರ ನಡೆಸುತ್ತಿದ್ದಾರೆ” ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆರೋಪ ಮಾಡಿದ್ದರು. ಈ ವಿಚಾರವಾಗಿ ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ. ಮುಂದುವರಿದು, “ನಾವು ಯೂರೋಪ್‌ಗೆ ಕುಟುಂಬ ಸಮೇತ ಹೋಗಿದ್ದೆವು. ಕುಟುಂಬ ಸಮೇತ ವಿದೇಶಗಳಿಗೆ ಹೋದಾಗ ಅಲ್ಲೆಲ್ಲಾ ರಾಜಕೀಯ ಮಾಡಲು ಆಗುತ್ತಾ” ಎಂದು ಸುದ್ದಿಗಾರರನ್ನೇ ಪ್ರಶ್ನಿಸಿದರು.

**ಪೆನ್ ಡ್ರೈವ್ ಬಿಡಲ್ಲ**

ಸದ್ಯಕ್ಕೆ ಯಾವುದೇ ಪೆನ್ ಡ್ರೈವ್ ಕೊಡಲ್ಲ. ಆಯ್ಕೆ ಮಾಡಿ ಅಧಿಕಾರ ಕೊಟ್ಟ ನಾಡಿನ ಜನತೆಗೆ ಎಲ್ಲಾ ಗೊತ್ತಾಗಬೇಕು. ಜನರಿಗೆ ಈ ವರ್ಷ ಎಲ್ಲ ಗ್ಯಾರಂಟಿ ಕೊಡ್ತಾರಾ, ಸಾವಿರಾರು ಕೋಟಿ ಸಾಲ ಮಾಡಿಕೊಂಡಿದ್ದಾರೆ ಎಂದು ಕುಮಾರಸ್ವಾಮಿ ಹರಿಹಾಯ್ದರು.

## ಇವರನ್ನು ಪ್ರಶ್ನಿಸಿದರೆ ಗುಂಡಿಕ್ಕುತ್ತಾರೆ ಎಚ್ಚರ: ನಟ ಕಿಶೋರ್

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕನ್ನಡದ ಖ್ಯಾತ ಚಿತ್ರನಟ ಕಿಶೋರ್ ಕುಮಾರ್ ಅವರು ಮತ್ತೆ ಪ್ರಧಾನಿ ಮೋದಿ ಹಾಗೂ ವ್ಯವಸ್ಥೆ ವಿರುದ್ಧ ಗುಡುಗಿದ್ದಾರೆ. ಈ ವಿಕೃತ ವಿಶ್ವಗುರುವನ್ನು ಹೊಡೆದೋಡಿಸಿ, ಪ್ರೀತಿಯ ಶಾಂತಿಯ ನಮ್ಮ ಭಾರತಕ್ಕೆ ಮರಳಬೇಕಿದೆ ಎಂದು ಕರೆ ಕೊಟ್ಟಿದ್ದಾರೆ.

ದೇಶದಲ್ಲಿ ನಡೆಯುತ್ತಿರುವ ಕೋಮು ಹಿಂಸಾಚಾರಗಳು, ಮಹಿಳೆಯರ ಮೇಲಿನ ನಿರಂತರ ದೌರ್ಜನ್ಯಗಳು ಹಾಗೂ ಈ ಆಡಳಿತ ವ್ಯವಸ್ಥೆ ವಿರುದ್ಧ ಮೇಲಿಂದ ಮೇಲೆ ಪ್ರತಿಕ್ರಿಯಿಸುವ ಕನ್ನಡದ ಸಂವೇದನಾಶೀಲ ನಟ ಕಿಶೋರ್ ಕುಮಾರ್ ಅವರು ಇದೀಗ ಮತ್ತೆ ದೇಶದಲ್ಲಿ ನಡೆಯುತ್ತಿರುವ ಘಟನೆಗಳನ್ನು ಉಲ್ಲೇಖಿಸಿ ವಿಶ್ವಗುರು ಎಂದು ಕರೆಯಿಸಿಕೊಳ್ಳುವ ನರೇಂದ್ರ ಮೋದಿ ವಿರುದ್ಧ ಗುಡುಗಿದ್ದಾರೆ.

ಇನ್‌ಸ್ಟಾಗ್ರಾಮ್‌ನಲ್ಲಿ ಕಿಶೋರ್ ಪೋಸ್ಟ್ ಹಾಕಿದ್ದು, ”ದೇಶದಲ್ಲಿ ವಿಶ್ವಗುರುಗಳಿದ್ದಾರೆ ಎಚ್ಚರ.. ಮಣಿಪುರದಲ್ಲಿ, ಹರಿಯಾಣದಲ್ಲಿ, ಮುಂಬೈ ರೈಲಿನಲ್ಲಿ, ಟಿವಿ ಚಾನೆಲ್ಲುಗಳಲ್ಲಿ , ಪಾರ್ಲಿಮೆಂಟಿನಲ್ಲಿ , ಕಪಟ ಕ್ಯಾಪಿಟಲಿಸ್ಟುಗಳ ಡ್ರಾಯಿಂಗು ರೂಮಿನಲ್ಲಿ , ಕೋರ್ಟು ಕಚೇರಿಗಳಲ್ಲಿ ಪೋಲೀಸು ವೇಷದಲ್ಲಿ, ಐಟಿ ಸೆಲ್ಲುಗಳಲ್ಲಿ, ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ ದೇಶದ ಮೂಲೆ ಮೂಲೆಯಲ್ಲಿ.. ದೇವರ ಹೆಸರಲ್ಲಿ, ಅಧಿಕಾರ ದಾಹದ ಹೊಲಸಲ್ಲಿ , ಮತಿಭ್ರಮಿತರಾದ ಮತಾಂಧ ವಿಶ್ವಗುರುಗಳಿದ್ದಾರೆ.. ಎಚ್ಚರ ಎಂದು ಬರೆದಿದ್ದಾರೆ.

ಇವರಿಗೆ ಜೈ ಅನ್ನದಿದ್ದರೆ, ಇವರನ್ನು ಪ್ರಶ್ನಿಸಿದರೆ ಯೋಚಿಸಿದರೂ ಸಹ ಗುಂಡಿಕ್ಕುತ್ತಾರೆ, ಬಡಿದು ಕೊಲ್ಲುತ್ತಾರೆ, ಮನೆ ಮಠ ಸುಡುತ್ತಾರೆ, ಕೆಡವುತ್ತಾರೆ, ಮಕ್ಕಳನ್ನು ಕಡಿದು ಕೊಲ್ಲುತ್ತಾರೆ. ಬೆತ್ತಲೆ ಮೆರವಣಿಗೆ ಮಾಡಿಸಿ ಅತ್ಯಾಚಾರ ಮಾಡುತ್ತಾರೆ, ದೇಶದ ಕೀರ್ತಿ ವಿಶ್ವದಲ್ಲೆಲ್ಲ ಹರಡುತ್ತಾರೆ ಎಚ್ಚರ ಎಂದು ಹೇಳಿದ್ದಾರೆ.

ಬನ್ನಿ ಒಂದಾಗುವ ನಮ್ಮ ನಮ್ಮಲ್ಲಿ ಹೊಡೆದಾಡುವುದನ್ನು ಬಿಟ್ಟು ನಾವೆಲ್ಲರೂ ಒಂದಾಗಿ ಹೊಡೆದೋಡಿಸಬೇಕಿದೆ. ಈ ವಿಕೃತ ವಿಶ್ವಗುರುಗಳನು.. ಮತ್ತೆ ಮರಳಬೇಕಿದೆ ಪ್ರೀತಿಯ ಶಾಂತಿಯ ನಮ್ಮ ಭಾರತಕೆ ಎಂದು ಕಿಶೋರ್ ಕುಮಾರ್ ಕರೆ ಕೊಟ್ಟಿದ್ದಾರೆ.

## ಧರ್ಮಸ್ಥಳ ಧರ್ಮಾಧಿಕಾರಿ ಪರ ಪ್ರತಿಭಟನೆ; ಸೌಜನ್ಯ ಕುಟುಂಬದ ಮೇಲೆ ಹಲ್ಲೆಗೆ ಯತ್ನ

■ **ವಿಜಯಸಾಕ್ಷಿ ಸುದ್ದಿ, ಬೆಳ್ತಂಗಡಿ**



ಸೌಜನ್ಯ ಪ್ರಕರಣದಲ್ಲಿ ಧರ್ಮಸ್ಥಳ ಟ್ರಸ್ಟ್ ವಿರುದ್ಧ ಅವಹೇಳನ ಮಾಡಲಾಗುತ್ತಿದೆ ಎಂದು ಆರೋಪಿ, ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಪರವಾಗಿ ಧರ್ಮಸ್ಥಳದಲ್ಲಿ ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿವೆ. ಪ್ರತಿಭಟನೆಯಲ್ಲಿ ಸೌಜನ್ಯ ತಾಯಿ ಕುಸುಮಾವತಿ ‘ಜಸ್ಟಿಸ್ ಫಾರ್ ಸೌಜನ್ಯ’ ಎಂಬ ಪ್ಲೆಕಾರ್ಡ್ ಹಿಡಿದು ಕಾಣಿಸಿಕೊಂಡಿದ್ದಾರೆ. ಅವರು ಮತ್ತು ಸೌಜನ್ಯ ಸಹೋದರ ಸುಭಾಷ್ ಚಂದ್ರ ಮೇಲೆ ಪ್ರತಿಭಟನಾನಿರತನೊಬ್ಬ ಹಲ್ಲೆ ಮಾಡಲು ಯತ್ನಿಸಿದ್ದಾನೆ.

ಹನ್ನೊಂದು ವರ್ಷಗಳ ಹಿಂದೆ ನಡೆದ ಸೌಜನ್ಯ ಪ್ರಕರಣದ ಹೋರಾಟ ಮತ್ತೆ ಮುನ್ನೆಲೆಗೆ ಬಂದಿದೆ. ಮೂವರು ಜೈನ್‌ಗಳು ಸೌಜನ್ಯಳನ್ನು ಅತ್ಯಾಚಾರಗೈದು ಕೊಲೆ ಮಾಡಿದ್ದಾರೆಂದು ಸೌಜನ್ಯ ಕುಟುಂಬ ಮೊದಲಿನಿಂದಲೂ ಆರೋಪಿಸುತ್ತಾ ಬಂದಿದೆ. ಇದೀಗ, ರಾಜ್ಯಾದ್ಯಂತ ಹೋರಾಟ ನಡೆಯುತ್ತಿರುವ ಬೆನ್ನಲ್ಲೇ, ಧರ್ಮಸ್ಥಳದ ಅವಹೇಳನವಾಗುತ್ತಿದೆಯೆಂದು ಧರ್ಮಸ್ಥಳ ಧರ್ಮಾಧಿಕಾರಿ ವೀರೇಂದ್ರ ಹೆಗಡೆ ಆರೋಪಿಸಿದ್ದಾರೆ. ಅವರ ಬೆಂಬಲಿಗರು ಶುಕ್ರವಾರ ಪ್ರತಿಭಟನೆ ನಡೆಸಿದ್ದಾರೆ.

ಪ್ರತಿಭಟನೆಯಲ್ಲಿ ಸೌಜನ್ಯ ತಾಯಿ, ‘ತನ್ನ ಮಗಳಿಗೆ ನ್ಯಾಯ ಬೇಕು’ ಎಂದು ವೇದಿಕೆ ಮುಂಭಾಗದಲ್ಲಿ ಘೋಷಣೆ ಕೂಗಿದ್ದಾರೆ. ಈ ವೇಳೆ, ಧರ್ಮಾಧಿಕಾರಿ ಬೆಂಬಲಿಗನೊಬ್ಬ ಪೊಲೀಸರ ಮುಂದೆಯೇ ಸುಭಾಷ್ ಚಂದ್ರ ಅವರ ಶರ್ಟ್ ಕುತ್ತಿಗೆ ಪಟ್ಟಿ ಹಿಡಿದು ಎಳೆದಾಡಲು ಯತ್ನಿಸಿದ್ದಲ್ಲದೆ, ಬೆರಳು ತೋರಿಸಿ ಬೆದರಿಕೆ ಒಡ್ಡಿದ್ದಾನೆ. ಇದೇ ವ್ಯಕ್ತಿ ಬೆಂಗಳೂರಿನಲ್ಲಿ ಸೌಜನ್ಯ ಪರ ನಡೆದ ಪ್ರತಿಭಟನೆಯಲ್ಲಿ ಸೌಜನ್ಯ ಸೋದರಮಾವ ವಿಠಲ್ ಮೇಲೂ ಹಲ್ಲೆಗೆ ಯತ್ನಿಸಿದ್ದ ಎಂದು ಆರೋಪಿಸಲಾಗಿದೆ.

ಮಾಧ್ಯಮದವರೊಂದಿಗೆ ಮಾತನಾಡಿದ ಸೌಜನ್ಯ ತಾಯಿ ಕುಸುಮಾವತಿ, “ಇಲ್ಲಿ ನೆರೆದಿರುವವರು ಸೌಜನ್ಯಳಿಗೆ ನ್ಯಾಯ ದೊರೆಯಬೇಕೆಂದು ಹೋರಾಟ ಮಾಡುತ್ತಿಲ್ಲ. ಇದು ಸೌಜನ್ಯ ಪರ ಹೋರಾಟವಲ್ಲ. ಇಲ್ಲಿ ಯಾರೂ ಸೌಜನ್ಯ ಪರ ಪ್ಲೆಕಾರ್ಡ್ ಹಿಡಿದಿಲ್ಲ. ಘೋಷಣೆ ಕೂಗಿಲ್ಲ. ಸೌಜನ್ಯ ಪ್ರಕರಣ ದೇಶದ ಗಮನ ಸೆಳೆಯುತ್ತಿದೆ. ಧರ್ಮಸ್ಥಳದಲ್ಲಿ ನಡೆಯುತ್ತಿರುವ ಅನ್ಯಾಯಗಳು ಜಗತ್ತಿಗೆ ಗೊತ್ತಾಗುತ್ತದೆ ಎಂಬ ಕಾರಣಕ್ಕೆ ನಮ್ಮ ಹೋರಾಟವನ್ನು ಹತ್ತಿಕ್ಕುವ ಉದ್ದೇಶದಿಂದ ಈ ಹೋರಾಟ ನಡೆಸುತ್ತಿದ್ದಾರೆ” ಎಂದು ಆರೋಪಿಸಿದ್ದಾರೆ.

## ವಿವಾದಿತ ದೆಹಲಿ ಸೇವಾ ಮಸೂದೆ ಅಂಗೀಕಾರ: ಸಭಾತ್ಯಾಗ ಮಾಡಿದ INDIA ಸದಸ್ಯರು

■ **ವಿಜಯಸಾಕ್ಷಿ ಸುದ್ದಿ, ನವದೆಹಲಿ**



ದೆಹಲಿಯ ಆಡಳಿತ ಸೇವೆಗಳಿಗೆ ಸಂಬಂಧಿಸಿದ ಅಧಿಕಾರವನ್ನು ತನ್ನ ಹಿಡಿತದಲ್ಲಿ ಇಟ್ಟುಕೊಳ್ಳುವ ಉದ್ದೇಶದಿಂದ ಕೇಂದ್ರ ಸರ್ಕಾರ ಮಂಡಿಸಿದ ರಾಷ್ಟ್ರ ರಾಜಧಾನಿ ಪ್ರದೇಶ ದಹಲಿ, ಸರ್ಕಾರದ (ತಿದ್ದುಪಡಿ) ಮಸೂದೆ ಲೋಕಸಭೆಯಲ್ಲಿ ಗುರುವಾರ ಅಂಗಿಕಾರ ಆಗಿದೆ. ಈ ವೇಳೆ ವಿರೋಧ ಪಕ್ಷಗಳ ಒಕ್ಕೂಟ INDIAದ ಸದಸ್ಯರು ಸಭಾತ್ಯಾಗ ಮಾಡಿದರು.

ಸಂಸತ್‌ನ ಕೆಳಮನೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಮಂಡಿಸಿದ ಈ ಮಸೂದೆಗೆ ಬಿಜು ಜನತಾದಳ, ವೈಎಸ್‌ಆರ್ ಕಾಂಗ್ರೆಸ್ ಪಕ್ಷ ಹಾಗೂ ಟಿಡಿಪಿ ಬೆಂಬಲ ನೀಡಿದವು. ಸೋಮವಾರ ಈ ಮಸೂದೆಯು ರಾಜ್ಯಸಭೆಯಲ್ಲಿ ಮಂಡನೆಯಾಗಲಿದ್ದು, ಅಲ್ಲಿಯೂ ನಿರಾಯಾಸವಾಗಿ ಅಂಗೀಕಾರವಾಗುವ ನಿರೀಕ್ಷೆ ಇದೆ.

ಈ ಮಸೂದೆಯನ್ವಯ ದೆಹಲಿ ಸರ್ಕಾರದ ಅಧಿಕಾರಿಗಳ ವರ್ಗಾವಣೆ ಮತ್ತು ನಿಯೋಜನೆಯ ಮೇಲೆ ಕೇಂದ್ರವು ಸಂಪೂರ್ಣ ಹಿಡಿತ ಹೊಂದಲಿದೆ. ಮಸೂದೆಗೆ ಸಂಬಂಧಿಸಿದಂತೆ ನಾಲ್ಕು ಗಂಟೆಗಳ ಕಾಲ ಚರ್ಚೆ ನಡೆಯಿತು. ಖಓಆಖಂದ ಸದಸ್ಯರ ಟೀಕೆಗಳಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಕ್ರಿಯಿಸಿದರು. ಬಳಿಕ ಧ್ವನಿಮತದ ಮೂಲಕ ಒಪ್ಪಿಗೆ ನೀಡಲಾಯಿತು. ಬಳಿಕ ಸದನವನ್ನು ಶುಕ್ರವಾರಕ್ಕೆ ಮುಂದೂಡಲಾಯಿತು.

ಸಂವಿಧಾನಕ್ಕೆ ಅಡಿಪಾಯ ಹಾಕಲು ಶ್ರಮಿಸಿದ ದೇಶದ ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರೂ, ಡಾ.ಬಿ.ಆರ್ ಅಂಬೇಡ್ಕರ್, ಕಾಂಗ್ರೆಸ್ ನಾಯಕರಾದ ಸಿ. ರಾಜಗೋಪಾಲಚಾರಿ, ಸರ್ದಾರ್ ಪಟೇಲ್ ಅವರ ಸೇವೆಯನ್ನು ಸ್ಮರಿಸಿ ಅಮಿತ್ ಶಾ ಅವರು ಮಸೂದೆ ಮಂಡಿಸಿದರು.

ಇದಕ್ಕೆ ಅಚ್ಚರಿ ವ್ಯಕ್ತಪಡಿಸಿದ ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ, ನೆಹರೂ ಹಾಗೂ ಕಾಂಗ್ರೆಸ್ ಪಕ್ಷವನ್ನು ಅಮಿತ್ ಶಾ ಅವರು ಹೊಗಳುತ್ತಿದ್ದಾರೆ. ನನಗೆ ಇದನ್ನು ನಂಬಲಾಗುತ್ತಿಲ್ಲ ಎಂದರು.

## ಶಂಕಿತ ಡೆಂಗ್ಯೂ ಜ್ವರಕ್ಕೆ ಮೂರು ವರ್ಷದ ಬಾಲಕ ಸಾವು!

■ **ವಿಜಯಸಾಕ್ಷಿ ಸುದ್ದಿ, ಹಾಸನ**

ಹಾಸನದ ಅರಸೀಕೆರೆ ತಾಲೂಕಿನ ಬಂದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಳನಕೊಪ್ಪಲು ಗ್ರಾಮದಲ್ಲಿ ಶಂಕಿತ ಡೆಂಗ್ಯೂ ಜ್ವರಕ್ಕೆ ಮೂರು ವರ್ಷದ ಬಾಲಕ ಮೃತಪಟ್ಟಿರುವ ಘಟನೆ ನಡೆದಿದೆ.

ಶಂಕಿತ ಡೆಂಗ್ಯೂ ಜ್ವರ–ಕ್ಕೆ ಮೂರು ವರ್ಷದ ಚರಣ್ ಮೃತ ಬಾಲಕನಾಗಿದ್ದಾನೆ.

ಗ್ರಾಮದಲ್ಲಿ ಕಳೆದ ಒಂದು ತಿಂಗಳಿಂದ ಜನರನ್ನು ಡೆಂಗ್ಯೂ ಜ್ವರ ಕಾಡುತ್ತಿದ್ದರೂ ಸೋಂಕು ತಡೆಗೆ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ. ಬಾಲಕನ ಸಾವಿಗೆ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ಚರಣ್ ಪೋಷಕರು ಚಿಕ್ಕಮಗಳೂರಿನಲ್ಲಿ ನೆಲೆಸಿದ್ದಾರೆ. ಹಾಸನಕ್ಕೆ ಬಂದು ಚಿಕ್ಕಮಗಳೂರಿಗೆ ಹೋದ ಬಳಿಕ ಚರಣ್ ಗೆ ಜ್ವರ ಬಂದಿತ್ತು.

ಹೀಗಾಗಿ ಆತನನ್ನು ಚಿಕ್ಕಮಗಳೂರು ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗಿತ್ತು. ಆದರೆ ಹೆಚ್ಚುವರಿ ಚಿಕಿತ್ಸೆಗಾಗಿ ಹಾಸನದ ಹಿಮ್ಸ್‌ಗೆ ಪೋಷಕರು ದಾಖಲಿಸಿದ್ದರು.

ಅಲ್ಲಿಯೂ ಜ್ವರ ಕಡಿಮೆಯಾಗದಿದ್ದರಿಂದ ಬೆಂಗಳೂರಿಗೆ ಕರೆದೊಯ್ಯುವ ವೇಳೆ ಚರಣ್ ಮೃತಪಟ್ಟಿದ್ದಾನೆ. ಚರಣ್ ಸಾವಿಗೆ ಅಧಿಕಾರಿಗಳ ನಿರ್ಲಕ್ಷ್ಯವೇ ಕಾರಣ ಎಂದು ಆಕ್ರೋಶ ಹೊರಹಾಕಿರುವ ಗ್ರಾಮಸ್ಥರು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಗ್ರಾಮದಲ್ಲಿ ರೋಗ ನಿಯಂತ್ರಣಕ್ಕೆ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದ್ದಾರೆ.

## ಆ. 9 ರಂದು ಸಾರ್ವಜನಿಕರಿಂದ ಅಹವಾಲು ಸ್ವೀಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಅಪರ ಪೊಲೀಸ್ ಮಹಾ ನಿರ್ದೇಶಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಆಗಸ್ಟ್ 9 ರಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 2 ಗಂಟೆಯವರೆಗೆ ತಹಸೀಲ್ದಾರ ಕಚೇರಿ ಸಭಾ ಭವನ ರೋಣದಲ್ಲಿ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಸದರಿ ದಿನಾಂಕದಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಹವಾ ನಿಯಂತ್ರಿತ ಬಾಡಿಗೆ ವಾಹನ ಕನಿಷ್ಟ ದರಪಟ್ಟಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿಗೆ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿ, ಗದಗ ಇವರ ಕಚೇರಿ ಉಪಯೋಗಕ್ಕಾಗಿ ಆಗಸ್ಟ್ 2023 ರಿಂದ ಜುಲೈ 2024ರ ವರೆಗಿನ 1 ವರ್ಷದ ಅವಧಿಗೆ ಹವಾ ನಿಯಂತ್ರಿತ ಬಾಡಿಗೆ ವಾಹನ ಪೂರೈಕೆಗಾಗಿ ಕನಿಷ್ಟ ದರಪಟ್ಟಿಯನ್ನು ಆಹ್ವಾನಿಸಲಾಗಿದೆ. ಅರ್ಹ ಹಾಗೂ ಆಸಕ್ತಿಯುಳ್ಳ ಸಂಸ್ಥೆಯವರು ನಮೂನೆಗಳನ್ನು ಕಚೇರಿಯಿಂದ ಪಡೆದು ಆಗಸ್ಟ್ 18 ರ ಮಧ್ಯಾಹ್ನ 3 ಗಂಟೆಯೊಳಗಾಗಿ ದರಪಟ್ಟಿಯನ್ನು ಸಲ್ಲಿಸಬಹುದಾಗಿದೆ. ಷರತ್ತುಗಳು ಹಾಗೂ ಇತರೆ ಮಾಹಿತಿಗಾಗಿ ಕಚೇರಿಯ ಸೂಚನಾ ಫಲಕವನ್ನು ನೋಡಬಹುದಾಗಿದೆ ಎಂದು ಗದಗ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ವೀರೇಶ್ವರ ಶಿವಯೋಗಿಗಳ ಮೌನಾನುಷ್ಠಾನ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತಾಲೂಕಿನ ಕದಾಂಪೂರ ಗ್ರಾಮದ ಬಸವೇಶ್ವರ ದೇವಸ್ಥಾನದಲ್ಲಿ ಶ್ರೀ ಜಗದ್ಗುರು ಮೃಡಗಿರಿ ಅನ್ನದಾನೀಶ್ವರ ಸಂಸ್ಥಾನ ಶಾಖಾಮಠದ ನರಸಾಪೂರ ತಪೋವನದ ಶ್ರೀ ಡಾ. ವೀರೇಶ್ವರ ಶಿವಯೋಗಿಗಳ 10 ದಿನಗಳ ಮೌನಾನುಷ್ಠಾನವು ಆಗಸ್ಟ್ 1ರಿಂದ ಆರಂಭಗೊಂಡಿದ್ದು, ಆ.10ರಂದು ಮುಕ್ತಾಯಗೊಳ್ಳಲಿದೆ.

ಡಾ. ವೀರೇಶ್ವರ ಶಿವಯೋಗಿಗಳು ಲೋಕಕಲ್ಯಾಣಾರ್ಥವಾಗಿ, ಭಕ್ತರ ಉದ್ಧಾರಕ್ಕಾಗಿ ಅಧಿಕ ಶ್ರಾವಣ ಮಾಸದ ನಿಮಿತ್ತ ಶ್ರೀ ಸದ್ಗುರು ಶಾಂಡಲ್ಯ ಮಹಾರಾಜರ ಪರಂಪರಾಗತ ಶ್ರೀ ಸದ್ಗುರು ಪತ್ರೇಶ್ವರ ಮಹಾರಾಜರು ತಪಗೈದ ಜಾಗೃತ ಗವಿಯಲ್ಲಿ ಮೌನಾನುಷ್ಠಾನ ಕೈಗೊಂಡಿದ್ದಾರೆ ಎಂದು ಶ್ರೀ ಭಕ್ತ ಮಂಡಳಿ ತಿಳಿಸಿದೆ.

## ಕ್ಷಯ ರೋಗದ ಬಗ್ಗೆ ಜಾಗೃತಿವಹಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಕ್ಷಯ ರೋಗದ ಬಗ್ಗೆ ಪ್ರತಿಯೊಬ್ಬರಿಗೂ ಅರಿವು ಮೂಡಿಸಿ, ಜಾಗೃತಗೊಳಿಸಬೇಕು. ಕ್ಷಯ ರೋಗಿಗಳಿಗೆ ಉತ್ತಮ ಚಿಕಿತ್ಸೆ, ನಮ್ಮವರೆಂಬ ಆತ್ಮೀಯ ಭಾವನೆಯಲ್ಲಿ ಸದಾ ಬೆರೆತು, ಅವರು ಉತ್ತಮ ಜೀವನ ನಡೆಸಲು ಮುಕ್ತ ಅವಕಾಶ ನಿಡಬೇಕು ಎಂದು ತಾಲೂಕಾ ಕ್ಷಯ ರೋಗ ಹಿರಿಯ ನಿರೀಕ್ಷಣಾಧಿಕಾರಿ ಎಫ್ ಬಿ ಮೋದಿನ ಹೇಳಿದರು.

ಅವರು ಸಮೀಪದ ಕಣಗಿನಹಾಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಮಕ್ಕಳಿಗೆ ಕ್ಷಯ ರೋಗ ಜಾಗೃತಿಯ ಕರಪತ್ರ ನೀಡಿ ಮಾತನಾಡಿ, ಕ್ಷಯ ರೋಗ ಸಾಂಕ್ರಾಮಿಕ ರೋಗವಾಗಿದ್ದು, ರೋಗದ ಲಕ್ಷಣ ಕಂಡುಬಂದಲ್ಲಿ ಹತ್ತಿರದ ಸಾರಕಾರಿ ಆಸ್ಪತ್ರೆಗೆ ಭೇಟಿ ನೀಡಿ ಸೂಕ್ತ ಚಿಕಿತ್ಸೆ ಪಡೆದು ಗುಣಮುಖರಾಗಬೇಕು. 2025ರೊಳಗೆ ಕ್ಷಯ ಮುಕ್ತ ದೇಶ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೊಡಿಸಬೇಕು ಎಂದರು.

ವಿದ್ಯಾ ಕಿತ್ತೂರ, ಶಾಲಾ ಪ್ರಾಚಾರ್ಯ ಡಿ ಬಿ ಅಡವಿ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ನೀಲಮ್ಮಾ ತಳವಾರ, ಸದಸ್ಯರು, ಅಂಗನವಾಡಿ ಶಿಕ್ಷಕಿಯರು ಇದ್ದರು.

### 'ಗೃಹ ಜ್ಯೋತಿ' ಯೋಜನೆಗೆ ಸಿ.ಎಂ. ಸಿದ್ದರಾಮಯ್ಯ ಇಂದು ಚಾಲನೆ-ಸಚಿವ ಪ್ರಿಯಾಂಕ್ ಖರ್ಗೆ

# ಜನರಲ್ಲಿ ಆರ್ಥಿಕ ಸ್ಥಿರತೆ ಸಾಧಿಸಲು ಪಂಚ ಗ್ಯಾರಂಟಿ ಯೋಜನೆ ಜಾರಿಗೆ





■ ವಿಜಯಸಾಕ್ಷಿ ಸುದ್ದಿ, ಕಲಬುರಗಿ

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ "ಗೃಹ ಜ್ಯೋತಿ" ಯೋಜನೆಗೆ ಆಗಸ್ಟ್ 5 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಲಬುರಗಿಯಲ್ಲಿ ಚಾಲನೆ ನೀಡಲಿದ್ದು, ರಾಜ್ಯದ ಜನರಲ್ಲಿ ಆರ್ಥಿಕ ಸ್ಥಿರತೆ ಸಾಧಿಸಲು ಈ ಪಂಚ ಗ್ಯಾರಂಟಿ ಯೋಜನೆ ಜಾರಿಗೆ ತರಲಾಗುತ್ತಿದೆ ಎಂದು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.

ಗೃಹ ಜ್ಯೋತಿ ಯೋಜನೆಗೆ ಚಾಲನೆ ಹಿನ್ನೆಲೆಯಲ್ಲಿ ಕಾರ್ಯಕ್ರಮದ ಕುರಿತು ಕೈಗೊಂಡ ಪೂರ್ವಸಿದ್ಧತೆ ಕುರಿತು ವಿವರಿಸಲು ಶುಕ್ರವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವರು, ಮುಖ್ಯಮಂತ್ರಿಗಳು ವೇದಿಕೆಯಲ್ಲಿ ಸಾಂಕೇತಿಕವಾಗಿ 10 ಜನ ಫಲಾನುಭವಿಗಳಿಗೆ ಶೂನ್ಯ ದರದ ವಿದ್ಯುತ್ ಬಿಲ್ ನೀಡುವ ಮೂಲಕ ಐತಿಹಾಸಿಕ ಯೋಜನೆಗೆ ಚಾಲನೆ ನೀಡಲಿದ್ದಾರೆ. ಇನ್ನುಳಿದಂತೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡುವರು ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಮತ್ತು ವಿಶ್ವಜ್ಯೋತಿ ಬಸವಣ್ಣನವರ ತತ್ವಗಳನ್ನು ಅಳವಡಿಸಿಕೊಂಡಿರುವ ನಮ್ಮ ಸರ್ಕಾರ ಸರ್ವರನ್ನು ಒಳಗೊಂಡ ಆರ್ಥಿಕ ಮತ್ತು ಸಾಮಾಜಿಕ ಪ್ರಗತಿ ಸಾಧಿಸಬೇಕು ಎಂಬುದು ನಮ್ಮ ಮಹಾದಾಸೆಯಾಗಿದೆ. ಇದಕ್ಕಾಗಿಯೇ ಇಂತಹ ಜನಪರ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಾಗುತ್ತಿದೆ ಎಂದರು.

ಗೃಹ ಜ್ಯೋತಿ ಚಾಲನೆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿಗಳ ಜೊತೆಗೆ ರಾಜ್ಯಸಭೆ ಪ್ರತಿಪಕ್ಷ ನಾಯಕ ಡಾ.ಮಲ್ಲಿಕಾರ್ಜುನ ಖರ್ಗೆ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಇಂಧನ ಸಚಿವ ಕೆ.ಜೆ.ಜಾರ್ಜ್, ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ. ಶರಣಪ್ರಕಾಶ ಪಾಟೀಲ ಸೇರಿದಂತೆ ಅಕ್ಕಪಕ್ಕದ ಜಿಲ್ಲೆಗಳ ಸಚಿವರು, ಚುನಾಯಿತ ಜನಪ್ರತಿನಿಧಿಗಳು, ಜಿಲ್ಲೆಯ ಶಾಸಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಸುಮಾರು 15 ಸಾವಿರ ಜನ ಆಗಮಿಸುವ ನಿರೀಕ್ಷೆ ಇದ್ದು, ಎಲ್ಲ ಪೂರ್ವಸಿದ್ಧತೆ ಭರದಿಂದ ಸಾಗಿದೆ ಎಂದರು.

ಗೃಹ ಜ್ಯೋತಿ ಯೋಜನೆಯಡಿ ಜುಲೈ 1 ರಿಂದ ಬಳಕೆ ಮಾಡಿದ ವಿದ್ಯುತ್‌ಗೆ ಆಗಸ್ಟ್ ಮಾಹೆಯ ಬಿಲ್‌ನಲ್ಲಿ ಅರ್ಹ ಫಲಾನುಭವಿಗಳಿಗೆ ಶೂನ್ಯ ದರದ ವಿದ್ಯುತ್ ಬಿಲ್ಲು ನೀಡಲಾಗುತ್ತದೆ. ಈ ಯೋಜನೆಯಡಿ ಕಲಬುರಗಿ ಜಿಲ್ಲೆಯಲ್ಲಿ 4,69,029 ಸೇರಿದಂತೆ ಜೆಸ್ಕಾಂ ವ್ಯಾಪ್ತಿಯಲ್ಲಿ 20,21,996, ಬೆಸ್ಕಾಂ-54,99,031, ಚೆಸ್ಕಾಂ-20,49,463, ಹೆಸ್ಕಾಂ-30,66,143, ಹೆಚ್.ಆರ್.ಇ.ಸಿ.ಎಸ್-76,562, ಮೆಸ್ಕಾಂ-14,53,001 ಸೇರಿದಂತೆ ರಾಜ್ಯದಲ್ಲಿ ಜುಲೈ 25ರ ವರೆಗೆ 1,41,23,240 ಜನರು ನೋಂದಣಿ ಮಾಡಿಕೊಂಡಿದ್ದಾರೆ. ಇವರೆಲ್ಲರಿಗೂ ಯೋಜನೆಯ ಲಾಭ ಸಿಗಲಿದೆ. ಆಗಸ್ಟ್ ಮಾಹೆಯಲ್ಲಿ ನೋಂದಣಿ ಮಾಡಿಕೊಂಡವರಿಗೆ ಮುಂದಿನ ತಿಂಗಳು ಸೌಲಭ್ಯ ದೊರೆಯಲಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ, ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್, ಕಲಬುರಗಿ ನಗರ ಪೊಲೀಸ್ ಆಯುಕ್ತ ಚೇತನ ಆರ್., ಜೆಸ್ಕಾಂ ಎಂ.ಡಿ. ರಾಹುಲ ಪಾಂಡ್ವೆ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವಾರ್ ಸಿಂಗ್ ಮೀನಾ, ಡಿ.ಸಿ.ಪಿ. ಅಡ್ಡೂರು ಶ್ರೀನಿವಾಸಲು, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಭುವನೇಶ ಪಾಟೀಲ ದೇವಿದಾಸ್ ಇದ್ದರು.

ಕಾರ್ಯಕ್ರಮ ಸ್ಥಳ ಪರಿಶೀಲನೆ:

ಪತ್ರಿಕಾಗೋಷ್ಠಿ ಮುನ್ನ ಸಚಿವ ಪ್ರಿಯಾಂಕ್ ಖರ್ಗೆ ಅವರು ಶಾಸಕ ಅಲ್ಲಮಪ್ರಭು ಪಾಟೀಲ ಸೇರಿದಂತೆ ಹಿರಿಯ ಅಧಿಕಾರಿಗಳೊಂದಿಗೆ ಗೃಹ ಜ್ಯೋತಿ ಚಾಲನಾ ಕಾರ್ಯಕ್ರಮ ನಡೆಯುವ ಸ್ಥಳವಾದ ನಗರದ ಎನ್.ವಿ.ಮೈದಾನಕ್ಕೆ ಭೇಟಿ ನೀಡಿ ಅಲ್ಲಿ ಕೈಗೊಳ್ಳುತ್ತಿರುವ ಪೂರ್ವಸಿದ್ಧತೆ ಪರಿಶೀಲಿಸಿ, ಅಧಿಕಾರಿಗಳಿಗೆ ಅಗತ್ಯ ಸಲಹೆ ಸೂಚನೆ ನೀಡಿದರು.

## ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಸ್ತನ್ಯಪಾನ ಅವಶ್ಯ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಗುವಿಗೆ ಸ್ತನ್ಯಪಾನ ಮಾಡಿಸುವುದರಿಂದ ಬುದ್ಧಿಶಕ್ತಿ ಹೆಚ್ಚುತ್ತದೆ ಎಂದು ಮುಳಗುಂದ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಸಿಬ್ಬಂದಿ ಸುಮಿತ್ರಾ ಹೊಂಬಳ ಹೇಳಿದರು.

ಅವರು ಪಟ್ಟಣದ ಗಣೇಶ ನಗರದ ಅಂಗನವಾಡಿ ಸಂಖ್ಯೆ 333 ಹಾಗೂ 137ರಲ್ಲಿ ವಿಶ್ವ ಸ್ತನ್ಯಪಾನ ಜಾಗೃತಿ ಸಪ್ತಾಹ ಕಾರ್ಯಕ್ರಮದಲ್ಲಿ ಮಾತನಾಡಿ, ಸ್ತನ್ಯಪಾನ ತಾಯಿ ಮತ್ತು ಮಗುವಿಗೆ ಆರೋಗ್ಯದ ದೃಷ್ಟಿಯಿಂದ ಬಹುಮುಖ್ಯ. 6 ತಿಂಗಳಿಗಿಂತ ಚಿಕ್ಕ ಮಕ್ಕಳು ಪೋಷಕಾಂಶದ ಕೊರತೆ ಉಂಟಾಗದಿರಲು ಹಾಗೂ ಅವರಲ್ಲಿ ರೋಗ ನಿರೋಧಕ ಶಕ್ತಿ ಹೆಚ್ಚಿಸಲು ಸ್ತನ್ಯಪಾನ ಅವಶ್ಯಕವಾಗಿದೆ. ತಾಯಿಯಲ್ಲಿ ಸ್ತನ ಕ್ಯಾನ್ಸರ್, ಮಧುಮೇಹ, ಹೃದಯ ಸಮಸ್ಯೆ ತಡೆಗಟ್ಟುವಲ್ಲಿ ಸ್ತನ್ಯಪಾನ ಸಹಾಯಕಾರಿಯಾಗಿದೆ ಎಂದರು.

ಅಂಗನವಾಡಿ ಶಿಕ್ಷಕಿ ವನಿತಾ ಬಸಾಪೂರ, ಎಸ್ ಎಂ ಪಟ್ಟಣಶೆಟ್ಟಿ, ರೇಷ್ಮಾ ಅಗರಕಟ್ಟಿ, ರೇಷ್ಮಾ ನದ್ದಿಮುಲ್ಲಾ, ರಜೀಯಾಬೆಗಂ ಸದರಭಾವಿ, ಕಲ್ಪನಾ ಪಂಗಾಡಿ, ಪೂಜಾ ಎಂ ಎಸ್, ಪೂಜಾ ಎಸ್ ಯು, ರಾಘು ವಿ ವಾಯ್, ಮಂಜು, ಪೂಜಾ ಸುಲೇಖಾ, ಮಕ್ಕಳು ಹಾಗೂ ತಾಯಂದಿರು ಇದ್ದರು.

## ಕೃತಪುರ ಅರ್ಬನ್ ಸೌಹಾರ್ದ ಸಂಘಕ್ಕೆ ಆಯ್ಕೆ





■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೃತಪುರ ಅರ್ಬನ್ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತ ಸಂಘದ ನಿರ್ದೇಶಕರುಗಳ ಚುನಾವಣೆಯು ಆಗಸ್ಟ್ 2ರಂದು ಜರುಗಿತು.

ಅಧ್ಯಕ್ಷರಾಗಿ ಮಹೇಶ ಚಂದ್ರಶೇಖರಪ್ಪ ಕೋಟಿ, ಉಪಾಧ್ಯಕ್ಷರಾಗಿ ಪ್ರೇಮನಾಥ ಬೆನಕಪ್ಪ ಬಣ್ಣದ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಸಹಕಾರಿ ಇಲಾಖೆಯ ಚುನಾವಣಾಧಿಕಾರಿ ಎಂ ವ್ಹಿ ಚುರ್ಚಿಹಾಳ ಹಾಗೂ ಪ್ರಶಾಂತ ಮುಧೋಳ ಅವರು ಚುನಾವಣೆಯ ಪ್ರಕ್ರಿಯೆಗಳನ್ನು ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ನಿರ್ದೇಶಕರು ಉಪಸ್ಥಿತರಿದ್ದರು ಎಂದು ಸಂಘದ ವ್ಯವಸ್ಥಾಪಕ ರಮೇಶ ಪಿಳ್ಳಿ ತಿಳಿಸಿದ್ದಾರೆ.

### ಹಮ್ಮಿಗಿ ಡ್ಯಾಮ್‌ಗೆ ಬಾಗಿನ ಅರ್ಪಿಸಿದ ಸುಜಾತಾ ದೊಡ್ಡಮನಿ

## ಜಿಲ್ಲೆಯ ಜನತೆಗೆ ತುಂಗಭದ್ರಾ ನದಿ ವರದಾನ



■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ತುಂಗಭದ್ರಾ ನದಿ ಭರ್ತಿಯಾಗಿದ್ದರಿಂದ ಈ ಭಾಗದ ರೈತರಿಗೆ ಹಾಗೂ ಸಾರ್ವಜನಿಕರಿಗೆ ತುಂಬಾ ಅನುಕೂಲವಾಗಿದ್ದು, ಜಿಲ್ಲೆಯ ಜನತೆಗೆ ತುಂಗಭದ್ರಾ ನದಿ ವರದಾನವಾಗಿದೆ ಎಂದು ಕೆಪಿಸಿಸಿ ಮಹಿಳಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುಜಾತಾ ಎನ್ ದೊಡ್ಡಮನಿ ಅಭಿಪ್ರಾಯಪಟ್ಟರು.

ಶುಕ್ರವಾರ ಹಮ್ಮಿಗಿ ಬ್ಯಾರೇಜಿನಲ್ಲಿ ಐದು ಜನ ಮುತ್ತೈದೆಯರಿಗೆ ಪಕ್ಷದ ಮುಖಂಡರೊಂದಿಗೆ ಉಡಿ ತುಂಬಿ, ತುಂಗಭದ್ರೆಗೆ ಬಾಗಿನ ಅರ್ಪಿಸಿ ಮಾತನಾಡಿದ ಅವರು, ಈ ಭಾಗದಲ್ಲಿ ಜನರಿಗೆ ತುಂಗಭದ್ರಾ ನದಿ ಭರ್ತಿಯಾಗಿದ್ದರಿಂದ ಸಾವಿರಾರು ಹೆಕ್ಟೇರ್ ಪ್ರದೇಶದಲ್ಲಿ ರೈತರ ಜಮೀನುಗಳಿಗೆ ನೀರಾವರಿಯ ಅನುಕೂಲವಾಗಿದ್ದು, ರೈತರು ಗುಳೇ ಹೋಗದೆ, ತಮ್ಮ ಜಮೀನುಗಳಲ್ಲಿ ಬೆಳೆ ಬೆಳೆದು, ಆರ್ಥಿಕವಾಗಿ ಸಬಲಾರಗಲು ಸಹಕಾರಿಯಾಗಿದೆ.

ಪ್ರತಿಯೊಬ್ಬರೂ ನೀರನ್ನು ಸರಿಯಾದ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಹಮ್ಮಿಗಿ ಗ್ರಾ ಪಂ ನೂತನ ಅಧ್ಯಕ್ಷ ಆಬಾಸಾಹೇಬ ಬಹದ್ದೂರ ದೇಸಾಯಿ ಪ್ರಾಸ್ತಾವಿಕಾವಾಗಿ ಮಾತನಾಡಿದರು. ಉಪಾಧ್ಯಕ್ಷೆ ಕಸ್ತೂರೆವ್ವ ತಳವಾರ, ಬ್ಲಾಕ್ ಕಾಂಗ್ರೆಸ್ ಘಟಕದ ಮಾಜಿ ಅಧ್ಯಕ್ಷ ರಾಮಚಂದ್ರ ಕಲಾಲ, ಯುವ ಕಾಂಗ್ರೆಸ್ ಮುಖಂಡ ರಾಜು ಡಾವಣಗೇರಿ, ಎಂ ಯು ಮಕಾಂದಾರ, ಭುವನೇಶ್ವರಿ ಕಲ್ಲಕುಟಕರ, ಯುವ ಕಾಂಗ್ರೆಸ್ ತಾಲೂಕಾ ಉಪಾಧ್ಯಕ್ಷ ವಿನೋದ್ ವಡ್ಡರ, ಗ್ರಾ ಪಂ ಸದಸ್ಯ ನಾಗರಾಜ ಮದ್ದಿನ, ರವೀಂದ್ರ ಬಂಡಿವಡ್ಡರ, ಶಕೀಲಾ ವಡ್ಡಟ್ಟಿ, ಪೂಜಾ ಕಮ್ಮಾರ, ಮಹಾದೇವಕ್ಕ ಭಜಂತ್ರಿ, ದೇವಕ್ಕ ಪೂಜಾರ, ಶಿವಾನಂದ ಮೇಟಿ, ಸಿದ್ದವ್ವ ಕರಿಗಾರ, ಕೋಟೆಪ್ಪ ಕಲಕೇರಿ, ಯಲ್ಲಮ್ಮ ಪೂಲಿನಿನಿ, ನಾಗಪ್ಪ ಹುಳಿಸೊಪ್ಪಿನ, ಮುಖಂಡರಾದ ಧರ್ಮಣ್ಣ ಚೌಟಗಿ, ಇಸ್ಮಾಯಿಲ್ ಖಾನ ತಂಬ್ರಳ್ಳಿ, ಶರಣಪ್ಪ ಮೇಟಿ, ಕೇಶಪ್ಪ ರೋಣದ, ಶಿವಪ್ಪ ಮಾರನಬಸರಿ, ರಮೇಶ್ ಕಮ್ಮಾರ, ಶಂಬುಲಿಂಗಯ್ಯ ಹೇಮಗಿರೀಶಮಠ, ರಾಮಾಂಜನಸಾಬ್ ಮಕಾಂದಾರ, ಶಿವಲಿಂಗಪ್ಪ ನಾಗರಹಳ್ಳಿ, ಪಕ್ಕೀರೇಶ ಉಳ್ಳಾಳ, ಪಕ್ಕೀರೇಶ್ ಹಳ್ಳಿ, ಹನಮಂತ ಹರಿಜನ, ಪೀರಸಾಬ್ ಜಾವಳಿ, ದೇವೇಂದ್ರ ಹರಿಜನ ಮುಂತಾದವರಿದ್ದರು.

## ಅಕ್ರಮ ಬಂಕರ್ ಧ್ವಂಸಗೊಳಿಸಿದ ಭದ್ರತಾ ಪಡೆ

■ ವಿಜಯಸಾಕ್ಷಿ ಸುದ್ದಿ, ಗುವಾಹಟಿ

ಹಿಂಸಾಚಾರ ಪೀಡಿತ ಮಣಿಪುರದ ಕೆಲವು ಭಾಗಗಳಲ್ಲಿ ಹೊಸ ಹಿಂಸಾಚಾರ ಭುಗಿಲೆದ್ದ ನಂತರ ಭದ್ರತಾ ಪಡೆಗಳು ಗುಡ್ಡಗಾಡು ಅಂಚಿನ ಪ್ರದೇಶಗಳಲ್ಲಿ ಶೋಧ ಕಾರ್ಯಾಚರಣೆಯನ್ನು ಹೆಚ್ಚಿಸಿದ್ದು ಏಳು ಅಕ್ರಮ ಬಂಕರ್‌ಗಳನ್ನು ನಾಶಪಡಿಸಿವೆ.

ಭದ್ರತಾ ಪಡೆಗಳು ಮತ್ತು ಪೊಲೀಸರು ಕೌತ್ರುಕ್ ಬೆಟ್ಟ ಶ್ರೇಣಿಯಲ್ಲಿ ಜಂಟಿ ಕಾರ್ಯಾಚರಣೆ ನಡೆಸಿ 7 ಅಕ್ರಮ ಬಂಕರ್‌ಗಳನ್ನು ನಾಶಪಡಿಸಿವೆ ಎಂದು ಮಣಿಪುರ ಪೊಲೀಸರು ಶುಕ್ರವಾರ ಟ್ವೀಟ್ ಮಾಡಿದ್ದಾರೆ.

ಗುರುವಾರ ಬೆಳಗ್ಗೆ ಇಂಫಾಲ್ ಪಶ್ಚಿಮ ಮತ್ತು ಕಾಂಗ್‌ಪೋಕ್ಪಿ ಜಿಲ್ಲೆಗಳ ಗಡಿಯಲ್ಲಿರುವ ಕೌತ್ರುಕ್, ಹರಾಥೆಲ್ ಮತ್ತು ಸೆಂಜಮ್ ಚಿರಾಂಗ್ ಪ್ರದೇಶಗಳಲ್ಲಿ ಮತ್ತೆ ಗುಂಡಿನ ಚಕಮಕಿಗಳು ನಡೆದಿದ್ದು, ಭದ್ರತಾ ಸಿಬ್ಬಂದಿ ಸಾವನ್ನಪ್ಪಿದ್ದು ನಾಗರಿಕರು ಗಾಯಗೊಂಡಿದ್ದಾರೆ. ಗುಂಡಿನ ಚಕಮಕಿಯ ನಂತರ ಅಕ್ರಮ ಬಂಕರ್‌ಗಳನ್ನು ಧ್ವಂಸಗೊಳಿಸಲಾಗಿದೆ.

ಗುರುವಾರ ನಡೆದ ಮತ್ತೊಂದು ಘಟನೆಯಲ್ಲಿ, ಹಿಂದಿನ ಹಿಂಸಾಚಾರದಲ್ಲಿ ಕೊಲ್ಲಲ್ಪಟ್ಟ ಬುಡಕಟ್ಟು ಜನಾಂಗದವರ ಶವಗಳನ್ನು ವಿವಾದಿತ ಸ್ಥಳದಲ್ಲಿ ಸಾಮೂಹಿಕವಾಗಿ ಹೂಳಲು ತೆರಳುತ್ತಿದ್ದ ಗುಂಪನ್ನು ಹತ್ತಿಕ್ಕಲು ಭದ್ರತಾ ಪಡೆಗಳು ಬಲವನ್ನು ಮಾಡಿದಾಗ ಈ ವೇಳೆ 20ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದರು.

### ಲಯನ್ಸ್ ಕ್ಲಬ್‌ನಿಂದ ಸಾವಯವ ಗೊಬ್ಬರ ತಯಾರಿಕೆಯ ಪ್ರಾತ್ಯಕ್ಷಿಕೆ

# ಸಾತ್ವಿಕ ಆಹಾರ ಸೇವಿಸಿ, ಆರೋಗ್ಯ ಸುಧಾರಿಸಿ



■ ವಿಜಯಸಾಕ್ಷಿ ಸುದ್ದಿ, ಗದಗ

ಸಾತ್ವಿಕ ಆಹಾರ ಸೇವನೆಯಿಂದ ಆರೋಗ್ಯ ಮತ್ತು ಜೀವನ ಶೈಲಿಯಲ್ಲಿಯೂ ಸಾತ್ವಿಕತೆ ಮೂಡಲು ಸಾಧ್ಯವಿದೆ. ಸಾತ್ವಿಕ ಬದುಕಿನಿಂದ ಆರೋಗ್ಯದಲ್ಲಿ ಸದೃಢತೆಯನ್ನು ಹೊಂದಬಹುದು ಎಂದು ಗದುಗಿನ ತೋಟಗಾರಿಕೆ ಇಲಾಖೆಯ ಸಹಾಯಕರಾದ ಮಂಜುನಾಥ ಹೂಗಾರ ಅಭಿಪ್ರಾಯಪಟ್ಟರು.

ಗದಗ-ಬೆಟಗೇರಿ ಲಾಯನ್ಸ್ ಕ್ಲಬ್‌ದಿಂದ ಗುರುವಾರ ಗದುಗಿನ ಶಿಗ್ಲಿಯವರ ಕಟ್ಟಡದಲ್ಲಿ ಏರ್ಪಡಿಸಿದ್ದ 'ಮನೆಯ ಅಂಗಳದಲ್ಲಿ ಕಿರು ತೋಟಗಾರಿಕೆ-ಸಾವಯುವ ಗೊಬ್ಬರ ತಯಾರಿಕೆಯ ಪ್ರಾತ್ಯಕ್ಷಿಕೆ' ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಕಳೆದ 10 ವರ್ಷಗಳಿಂದ ಸಾವಯವ ಗೊಬ್ಬರ ತಯಾರಿಕೆ, ಮನೆಯ ಅಂಗಳದಲ್ಲಿ ಕೈತೋಟ, ಟೆರೇಸ್ ಗಾರ್ಡನಿಂಗ್, ಕಿಚನ್ ಗಾರ್ಡನಿಂಗ್ ಪದ್ಧತಿಯನ್ನು ಹವ್ಯಾಸವಾಗಿ ರೂಢಿಸಿಕೊಂಡಿರುವದು ಅಭಿನಂದನೀಯ ಎಂದರು.

> ರಾಸಾಯನಿಕ ಗೊಬ್ಬರ, ರಾಸಾಯನಿಕಗಳ ಬಳಕೆಯಿಂದಾಗಿ ಆಹಾರ ಧಾನ್ಯ, ತರಕಾರಿಗಳ ಮೇಲೆ ಪರಿಣಾಮ ಉಂಟಾಗಬಹುದು. ಇದರಿಂದ ಸಹಜವಾಗಿ ಜನರ ಆರೋಗ್ಯದ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ. ಎಲ್ಲರೂ ಸಾವಯವ ಕೃಷಿ ಪದ್ಧತಿ ಅನುಸರಿಸಿದರೆ ಭೂಮಿಯ ಸತ್ವ, ಫಲವತ್ತತೆ ಹೆಚ್ಚಾಗಿ, ಆರೋಗ್ಯದಲ್ಲಿ ಸದೃಢತೆ ಬರಲು ಸಾಧ್ಯ.
>
> - ಮಂಜುನಾಥ ಹೂಗಾರ.

ಈ ರೀತಿಯ ಹವ್ಯಾಸ ಎಲ್ಲರಲ್ಲಿಯೂ ಬರಬೇಕಿದೆ. ಇದರಿಂದಾಗಿ ಅಡುಗೆ ಮನೆಯ ನಿರುಪಯುಕ್ತ ಪದಾರ್ಥ, ತರಕಾರಿ ಹೆಚ್ಚಿದ ಬಳಿಕ ಉಳಿಯುವ ತ್ಯಾಜ್ಯವನ್ನು ಸಾವಯವ ಗೊಬ್ಬರವಾಗಿಸಿ, ಅದನ್ನು ಗಾರ್ಡನಿಂಗ್‌ಗೆ ಹಾಗೂ ಕುಂಡಗಳಿಗೆ ಬಳಕೆ ಮಾಡಿಕೊಳ್ಳಬಹುದು. ಮನೆಯಂಗಳ ವಿಸ್ತಾರವಾಗಿದ್ದಲ್ಲಿ ತರಕಾರಿಯನ್ನೂ ಬೆಳೆದು, ತೋಟ, ಹೊಲಗಳಿಗೂ ಈ ಗೊಬ್ಬರವನ್ನು ಬಳಕೆ ಮಾಡಬಹುದು ಎಂದರು.

ಲಯನ್ಸ್ ಲೇಡಿಸ್ ಕ್ಲಬ್‌ನ ಅಧ್ಯಕ್ಷೆ ಸಾವಿತ್ರಿ ಶಿಗ್ಲಿ, ಮನೆಯ ಕೈತೋಟದಲ್ಲಿ ಸಾವಯವ ಕೃಷಿ ಪದ್ಧತಿಯನ್ನು ಅನುಸರಿಸಿದ್ದನ್ನು ಹಾಗೂ ಸಾವಯವ ಗೊಬ್ಬರ ತಯಾರಿಕೆ, ಬಳಕೆ ಮಾಡಿದ ವಿಧಾನವನ್ನು ವಿವರಿಸಿದರು.

ಲಯನ್ಸ್ ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ, ಕಾರ್ಯದರ್ಶಿ ಪ್ರವೀಣ ವಾರಕರ, ಖಜಾಂಚಿ ರಾಜು ಮಲ್ಲಾಡದ, ಲೇಡಿಸ್ ಕ್ಲಬ್‌ನ ಕಾರ್ಯದರ್ಶಿ ಅಮೃತಾ ವಾರಕರ, ಖಜಾಂಚಿ ಸುರೇಖಾ ಮಲ್ಲಾಡದ, ಗಿರಿಜಾ ಶಿರೋಳ, ಡಾ. ಭಕ್ತಿ ಕುಲಕರ್ಣಿ, ಮೀನಾ ಕುಷ್ಟಗಿ, ಜಯಶ್ರೀ ಮೇರವಾಡೆ, ವೀಣಾ ಸುಲಾಖೆ, ಪ್ರತಿಭಾ ಅಂಗಡಿ, ದೀಪ್ತಿ ಶಹಾ ಮುಂತಾದವರಿದ್ದರು.

## ಜಿಲ್ಲಾ ನೇಕಾರ ಕುರುಹಿನಶೆಟ್ಟಿ ಸಂಘದ ಉದ್ಘಾಟನೆ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ನೇಕಾರ ಕುರುಹಿನಶೆಟ್ಟಿ ಸಂಘದ ಉದ್ಘಾಟನೆ ಮತ್ತು ರಾಷ್ಟ್ರೀಯ ಕೈಮಗ್ಗ ನೇಕಾರರ ದಿನಾಚಾರಣೆ ಸಮಾರಂಭವು ಆಗಸ್ಟ್ 6ರಂದು ಬೆಳಿಗ್ಗೆ 10ಕ್ಕೆ ಶ್ರೀ ಶಂಕರ ಶಿವಾಚಾರ್ಯ ಕುರುಹಿನಶೆಟ್ಟಿ ಸಮುದಾಯ ಭವನ ಹುಯಿಗೋಳ ರಸ್ತೆ ಬೆಟಗೇರಿ-ಗದಗದಲ್ಲಿ ನೆರವೇರಲಿದೆ.

ಸಂಘದ ಉದ್ಘಾಟನೆಯನ್ನು ವಿಧಾನಪರಿಷತ್ ಸದಸ್ಯ ಹಾಗೂ ರಾಜ್ಯ ಬಿಜೆಪಿ ಕಾರ್ಯದರ್ಶಿ ಕೇಶವ ಪ್ರಸಾದ ನೆರವೇರಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗುರುಶಾಂತಪ್ಪ ದಂಡಿ ವಹಿಸಿಕೊಳ್ಳುವರು. ಮುಖ್ಯ ಅತಿಥಿಗಳಾಗಿ ಸಚಿವ ಎಚ್ ಕೆ ಪಾಟೀಲ, ವಿ ಪ ಸದಸ್ಯ ಎಸ್ ವಿ.ಸಂಕನೂರ, ಶಾಸಕರಾದ ಜಿ ಎಸ್ ಪಾಟೀಲ, ಸಿ ಸಿ ಪಾಟೀಲ, ಡಾ. ಚಂದ್ರು ಲಮಾಣಿ, ಮಾಜಿ ಶಾಸಕ ಡಿ ಆರ್ ಪಾಟೀಲ, ನಗರ ಸಭಾಧ್ಯಕ್ಷೆ ಉಷಾ ಮಹೇಶ್ ದಾಸರ, ಸಂಘದ ಖಜಾಂಚಿ ಮುರುಗೆಪ್ಪ ಬನ್ನಿ, ಸಂಧ್ಯಾ ಸೋಮಶೇಖರ ಟ್ರಸ್ಟ್(ರಿ) ಅಧ್ಯಕ್ಷ ಜಿ.ಸೋಮಶೇಖರ ಆಗಮಿಸುವರು.

ಸಂಘದ ಅಧ್ಯಕ್ಷ ಗುರುತಾಂತರಪ್ಪ ದಂಡಿ, ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜುನ ಕಲ್ಮನಿ, ಉಪಾಧ್ಯಕ್ಷ ವೀರಭದ್ರಪ್ಪ ಬಾಗೋಡಿ, ನಿರ್ದೇಶಕರುಗಳಾದ ಪ್ರಕಾಶ್ ಬಂಡಿ, ಪ್ರವೀಣ ಬಸವರಾಜ ಕಲ್ಮನಿ, ವೀರಣ್ಣ ಶೇಖಪ್ಪ ನಾಗಲೋಟಿ, ಪಂಚಪ್ಪ ಲಕ್ಕುಂಡಿ, ವೀರಣ್ಣ ಭದ್ರಪ್ಪ ಗುಂಡ್ಲೂರು, ಮಹಾಂತೇಶ ಬಸಪ್ಪ ಅಗಸಿಬಾಗಿಲ, ಮಾಂತೇಶ್ ದೇವಪ್ಪ ನೀರಜಿಡ್ಡಿ, ಸುಧಾ ಬಸವರಾಜ್ ಅಣ್ಣಿಗೇರಿ, ಮಹಾಂತೇಶ್ ಬಸವಣ್ಣಪ್ಪ ಚವಡಿ, ಸಂಘದ ಕಾನೂನು ಸಲಹೆಗಾರ ರಮೇಶ್ ಸಂಗಪ್ಪ ಅರಹುಣಿಸಿ, ಗದಗ ಜಿಲ್ಲೆಯ ಸಮಸ್ತ ಕುರುಹಿನಶೆಟ್ಟಿ ಸಮಾಜದ ಗುರು-ಹಿರಿಯರು ಮತ್ತು ಯುವಕ ಮಂಡಲಗಳ ಪರವಾಗಿ ಕಾರ್ಯಕ್ರಮಕ್ಕೆ ಸ್ವಾಗತವನ್ನು ಕೋರಿದ್ದಾರೆ.

ಕರ್ನಾಟಕ ಸರ್ಕಾರ (ಲೋಕೋಪಯೋಗಿ ಇಲಾಖೆ)

**ಕಾರ್ಯನಿರ್ವಾಹಕ ಅಭಿಯಂತರರು**

**ಲೋಕೋಪಯೋಗಿ ಇಲಾಖೆ ಗದಗ ವಿಭಾಗ ಗದಗ**

Phone No : 08372-238782 E.Mail : eepwdgdg@rediffmail.com, eepwdgad@gmail.com

ನಂ:ಕಾನಿಇಂಗಃಲೋಇ:ಪಿಬಿ-2:ಟೆ:ತಿದ್ದುಪಡಿ:2023-24 ದಿನಾಂಕ:04/08/2023

**ತಿದ್ದುಪಡಿ ಟೆಂಡರ ಪ್ರಕಟಣೆ**

ಈ ಕಛೇರಿ ಟೆಂಡರ ಪ್ರಕಟಣಿ ಪತ್ರ ನಂ: 1644 ದಿನಾಂಕ : **02-08-2023** ರಲ್ಲಿ ಕರೆಯಲಾದ 27 ಕಾಮಗಾರಿಗಳಿಗೆ ಟೆಂಡರನ್ನು ಆಹ್ವಾನಿಸಲಾಗಿದ್ದು, ವಿವರಗಳನ್ನಯ ಅಂತರಜಾಲ ವಿಳಾಸ **https://www.eproc.karnataka.gov.in** ರಲ್ಲಿ ನೋಡಿಕೊಳ್ಳುವ ಬದಲಾಗಿ **https://kppp.karnataka.gov.in** ರಲ್ಲಿ ನೋಡಿಕೊಳ್ಳುವುದು, ಉಳಿದ ಯಾವುದೇ ಬದಲಾವಣೆ ಇರುವುದಿಲ್ಲ.

ಸಹಿ/- ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ, ವಿಭಾಗ, ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/99/2023-24

ಗಿಡ-ಮರಗಳು ನಮ್ಮಪ್ರಾಣ: ಅಭಿನವ ಗವಿಸಿದ್ದೇಶ್ವರ ಸ್ವಾಮಿಗಳ ಮನದಾಳದ ಮಾತು

# ಗವಿಸಿದ್ದೇಶ್ವರ ಮಠದಲ್ಲಿ ಹಸಿರು ಕ್ರಾಂತಿ



**■ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ನಿಸರ್ಗವನ್ನು ಕಾಪಾಡಿಕೊಳ್ಳದೇ ಹೋದರೆ ಗಿಡ ಮರಗಳನ್ನು, ಗುಡ್ಡ ಬೆಟ್ಟಗಳನ್ನು, ನೀರು, ಖನಿಜ ಸಂಪತ್ತನ್ನು ಸಂರಕ್ಷಿಸದೇ ಹೋದರೆ ಭವಿಷ್ಯದಲ್ಲಿ ಕಂಟಕ ತಪ್ಪಿದ್ದಲ್ಲ. ಇದರಿಂದಾಗಿ ಮುಂದಿನ ಪೀಳಿಗೆಗೆ ನಾವೆಲ್ಲ ಅನ್ಯಾಯ ಮಾಡಿದಂತಾಗುತ್ತದೆ. ಈಗಿಂದಲೇ ನಿಸರ್ಗದ ಉಳಿವಿಗಾವಿ ನಾವೆಲ್ಲ ಪ್ರಯತ್ನಿಸುವ ಅಗತ್ಯವಿದೆ. ಗಿಡ-ಮರಗಳನ್ನು ನಮ್ಮ ಉಸಿರಿನಂತೆ ನೋಡಿಕೊಳ್ಳಬೇಕಿದೆ ಎಂದು ಕೊಪ್ಪಳದ ಗವಿಸಿದ್ದೇಶ್ವರ ಮಠದ ಅಭಿನವ ಗವಿಸಿದ್ದೇಶ್ವರ ಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು, ಗದಗ ಜಿಲ್ಲೆಯ ನಿಕಟಪೂರ್ವ ಅಪರ ಜಿಲ್ಲಾಧಿಕಾರಿ, ಪ್ರಸ್ತುತ ವಿಜಯನಗರದ ಹಂಪಿ ವಿಶ್ವ ಪಾರಂಪರಿಕ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಎಂ ಪಿ ಮಾರುತಿ ಅವರು ತಮ್ಮ ಸ್ನೇಹಿತರೊಂದಿಗೆ ಶ್ರೀಮಠದ ಗದ್ದುಗೆಯ ದರ್ಶನಕ್ಕೆ ತೆರಳಿದಾಗ ಶ್ರೀಗಳ ಆಶೀರ್ವಾದ ಪಡೆದು ಶ್ರೀಮಠದ ಅಭಿವೃದ್ಧಿಯ ಕುರಿತು ಚರ್ಚಿಸುವ ಸಂದರ್ಭದಲ್ಲಿ, ಗಿಡ-ಮರಗಳು ನಮ್ಮ ಪ್ರಾಣ. ಅವುಗಳಿಗೆ ಧಕ್ಕೆಯಾಗದಂತೆ ಕಟ್ಟಡದ ವಿನ್ಯಾಸವನ್ನೇ ಬದಲಿಸಿ ಕಟ್ಟುತ್ತಿರುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಡಾ.ಬಸವರಾಜ ಧಾರವಾಡ ಮಾತನಡಿ, ಕೊಪ್ಪಳದ ಗವಿಸಿದ್ದೇಶ್ವರ ಮಠ ಆಧ್ಯಾತ್ಮಿಕವಾಗಿ, ಸಾಮಾಜಿಕ ಅರಿವು ಹಾಗೂ ಚಿಂತನೆ ಮೂಡಿಸುವಲ್ಲಿ ಮುಂಚೂಣಿಯಲ್ಲಿರುವ ಮಠ. ಈ ಮಠದಲ್ಲಿ ಅನ್ನ, ಅಕ್ಷರ, ಆಶ್ರಯ, ಕಲ್ಪಿಸುವ ಮೂಲಕ ಸಾವಿರಾರು ವಿದ್ಯಾರ್ಥಿಗಳ ವಿದ್ಯಾರ್ಜನೆಗೆ ಅನುವು ಮಾಡಿಕೊಟ್ಟಿದ್ದು ಒಂದು ಪುಣ್ಯದ ಕೆಲಸವಾಗಿದೆ. ಜೊತೆಗೆ ಕೊಪ್ಪಳದ ಸುತ್ತಮುತ್ತಲಿನ ಗ್ರಾಮೀಣ ಭಾಗದಲ್ಲಿ ಸ್ವಚ್ಛತೆಯ ಅರಿವು, ವ್ಯಸನಮುಕ್ತ ಸಮಾಜಕಟ್ಟುವಲ್ಲಿ ಶ್ರೀಗಳು ಸದಾ ಕ್ರೀಯಾಶೀಲರಾಗಿದ್ದು ವಿಶೇಷವಾಗಿದೆ. ಹೀಗಾಗಿ, ಕೊಪ್ಪಳದ ಶ್ರೀಮಠ ನಾಡಿನ ಮಠಗಳಲ್ಲಿಯೇ ಒಂದು ವಿಶೇಷ ಹಾಗೂ ಅಪರೂಪದ ಧಾರ್ಮಿಕ ಕೇಂದ್ರವಾಗಿ ಭಕ್ತರ ಹೃದಯದಲ್ಲಿ ನೆಲೆಯಾಗಿ ನಿಂತಿದೆ ಎಂದರು.

ಮಾರುತಿ ಹಾಗೂ ಸ್ನೇಹಿತರಿಗೆ ಪ್ರಸಾದ ಉಣಬಡಿಸಿ ಶ್ರೀಗಳು ಆಶೀರ್ವಾದ ನೀಡಿದರು. ಈ ಸಂದರ್ಭದಲ್ಲಿ ನಿವೃತ್ತ ಮುಖ್ಯೋಪಾಧ್ಯಾಯ ಎಸ್ ಎಂ ಅಗಡಿ ಸೇರಿದಂತೆ ಅನೇಕ ಭಕ್ತರು ಉಪಸ್ಥಿತರಿದ್ದರು.

ಪಶು ವೈದ್ಯಾಧಿಕಾರಿ, ಸಿಬ್ಬಂದಿಗಳ ಕೊರತೆ: ಜಾನುವಾರುಗಳ ಚಿಕಿತ್ಸೆಗೆ ತೊಂದರೆ

# ಪಶು ವೈದ್ಯರ ಖಾಲಿ ಹುದ್ದೆಗಳ ಭರ್ತಿ ಯಾವಾಗ?



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಾ ಆಡಳಿತ ಕೇಂದ್ರದಲ್ಲಿಯೇ ಮುಖ್ಯ ಪಶುವೈದ್ಯಾಧಿಕಾರಿಯೂ ಸೇರಿದಂತೆ ವಿವಿಧ ಹುದ್ದೆಗಳು ಖಾಲಿ ಉಳಿದಿವೆ. ಸದ್ಯ ಮಾಗಡಿ ಗ್ರಾಮದ ಪಶುಚಿಕಿತ್ಸಾ ಕೇಂದ್ರದಲ್ಲಿ ಹಿರಿಯ ಪಶುವೈದ್ಯಾಧಿಕಾರಿ ಡಾ. ಎನ್ ಎಚ್ ಓಲೇಕಾರ ಕಾರ್ಯ ನಿರ್ವಹಿಸುತ್ತಿದ್ದಾರೆ. ಇಡೀ ತಾಲೂಕಿಗೆ ಇವರೊಬ್ಬರೇ ಪಶುವೈದ್ಯರಾಗಿ ಸೇವೆ ಸಲ್ಲಿಸುತ್ತಿದ್ದು, ಖಾಲಿ ಇರುವ ವಿವಿಧ ಹುದ್ದೆಗಳ ಭರ್ತಿ ಯಾವಾಗ ಎಂಬ ಕೂಗು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಕಚೇರಿಯ ಅಂಕಿ-ಅಂಶದ ಪ್ರಕಾರ ಶಿರಹಟ್ಟಿ ತಾಲೂಕಿನಲ್ಲಿ ಇತ್ತೀಚೆಗೆ ಗಂಟು ರೋಗ ಹಾಗೂ ವಿವಿಧ ಕಾರಣಗಳಿಂದ ಮೃತಪಟ್ಟ ಜಾನುವಾರುಗಳ ಪರಿಹಾರಕ್ಕಾಗಿ 257 ಅರ್ಜಿ ಸ್ವೀಕೃತವಾಗಿದ್ದವು. ಇದರಲ್ಲಿ 202ಕ್ಕೆ ಪರಿಹಾರ ವಿತರಿಸಲಾಗಿದ್ದು ಇನ್ನೂ 55 ಅರ್ಜಿಗಳು ಬಾಕಿ ಉಳಿದಿವೆ. ಅನುದಾನ ಬಂದ ಕೂಡಲೇ ಈ ಜಾನುವಾರುಗಳ ಮಾಲೀಕರಿಗೂ ಸಹ ಪರಿಹಾರ ವಿತರಿಸಲಾಗುವುದು, ಕಾಲಕಾಲಕ್ಕೆ ಎಲ್ಲ ಪಶುಚಿಕಿತ್ಸಾ ಕೇಂದ್ರಗಳಿಗೆ ಭೇಟಿ ನೀಡಿ, ಜಾನುವಾರುಗಳ ತಪಾಸಣೆ ನಡೆಸಿ ಔಷಧೋಪಚಾರವನ್ನು ಮಾಡಲಾಗುತ್ತಿದೆ. ಶೀಘ್ರದಲ್ಲಿಯೇ ಇಲಾಖೆ ವತಿಯಿಂದ ಅಂಬ್ಯುಲೆನ್ಸ್ ಸೇವೆಯೂ ಪ್ರಾರಂಭವಾಗಲಿದೆ ಎಂದು ಡಾ. ಎನ್ ಎಚ್.ಓಲೇಕಾರ ತಿಳಿಸಿದರು.

ಜಾನುವಾರುಗಳ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆಗೆಂದೇ ಇರುವ ಗ್ರಾಮೀಣ ಪ್ರದೇಶಗಳಲ್ಲಿಯ ಪಶು ಚಿಕಿತ್ಸಾ ಕೇಂದ್ರಗಳು ಅಗತ್ಯ ವೈದ್ಯಾಧಿಕಾರಿಗಳು, ಸಿಬ್ಬಂದಿಗಳ ಕೊರತೆಯಿಂದ ಜಾನುವಾರುಗಳಿಗೆ ತುರ್ತು ಸಂದರ್ಭಗಳಲ್ಲಿ ಚಿಕಿತ್ಸೆ ಲಭಿಸುವುದು ಕಷ್ಟಸಾಧ್ಯವಾಗುತ್ತಿದೆ. ಲಕ್ಷಾಂತರ ವ್ಯಯಿಸಿ ಜಾನುವಾರುಗಳನ್ನು ಖರೀದಿ ಮಾಡಿರುವ ಅನೇಕರಿಗೆ ತುರ್ತು ಸಂದರ್ಭಗಳಲ್ಲಿ ಜಾನುವಾರುಗಳಿಗೆ ಸಕಾಲಕ್ಕೆ ಚಿಕಿತ್ಸೆ ಲಭಿಸುವುದು ಅವಶ್ಯವಿದೆ. ಈ ಕುರಿತು ಪ್ರತಿಕ್ರಿಯಿಸಿದ ಶಿರಹಟ್ಟಿ ಎಸ್‌ಸಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಹಾಗೂ ಸಾಮಾಜಿಕ ಹೋರಾಟಗಾರ ಮುತ್ತುರಾಜ ಭಾವಿಮನಿ, ಶಿರಹಟ್ಟಿ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಪಶುವೈದ್ಯರ ಹುದ್ದೆಗಳು ಖಾಲಿ ಇರುವುದರಿಂದ ಜಾನುವಾರುಗಳ ಚಿಕಿತ್ಸೆಗೆ ತೊಂದರೆಯಾಗುತ್ತಿದೆ. ಆದಷ್ಟು ಬೇಗ ಸರಕಾರ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕೆಂದು ಆಗ್ರಹಿಸಿದರು.

> ಇಲಾಖೆಯಲ್ಲಿ 384ಹುದ್ದೆಗಳಲ್ಲಿ 104ಹುದ್ದೆಗಳು ಮಾತ್ರ ಭರ್ತಿ ಇದ್ದು, ಉಳಿದ ಹುದ್ದೆಗಳ ಭರ್ತಿಗೆ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಇತ್ತೀಚೆಗೆ 450 ಹುದ್ದೆಗಳ ಭರ್ತಿ ಪ್ರಕ್ರಿಯೆ ನಡೆಯುತ್ತಿದ್ದು ಇದರಲ್ಲಿ ಜಿಲ್ಲೆಗೆ ಪ್ರಾತಿನಿಧ್ಯ ನೀಡುವಂತೆಯೂ ಸಹ ವಿನಂತಿಸಲಾಗಿದೆ.
>
> **– ಡಾ. ಎಚ್ ಬಿ ಹುಲಗಣ್ಣವರ.**
> ಪಶುಪಾಲನಾ/ಪಶುವೈದ್ಯಕೀಯ ಇಲಾಖೆಯ ಉಪನಿರ್ದೇಶಕರು.

ಶಿರಹಟ್ಟಿ ಪಶು ಆಸ್ಪತ್ರೆಯ ಅಂಕಿ-ಅಂಶಗಳ ಪ್ರಕಾರ, ಶಿರಹಟ್ಟಿ ಆಸ್ಪತ್ರೆ ಸೇರಿದಂತೆ ತಾಲೂಕಿನ ಬೆಳ್ಳಟ್ಟಿ, ಕಡಕೋಳ, ಬನ್ನಿಕೊಪ್ಪ, ಹೆಬ್ಬಾಳ, ಮಾಗಡಿ, ಹೊಳೆ-ಇಟಗಿ, ಸೇವಾನಗರ ಗ್ರಾಮಗಳಲ್ಲಿ ಪಶುಚಿಕಿತ್ಸಾಲಯಗಳಿವೆ. ಇದರಲ್ಲಿ ಮುಖ್ಯ ಪಶುವೈದ್ಯಾಧಿಕಾರಿ(ಆಡಳಿತ)-ಖಾಲಿ, ಮುಖ್ಯ ಪಶುವೈದ್ಯಾಧಿಕಾರಿ-2 ಖಾಲಿ, ಹಿರಿಯ ಪಶುವೈದ್ಯಾಧಿಕಾರಿ-1(ಸಧ್ಯ ಇರುವ), ಪಶು ವೈದ್ಯಾಧಿಕಾರಿ-6 ಖಾಲಿ, ಜಾನುವಾರು ಅಭಿವೃದ್ಧಿ ಅಧಿಕಾರಿ-ಖಾಲಿ, ಹಿರಿಯ ಪಶು ವೈದ್ಯಕೀಯ ಪರೀಕ್ಷಕರು-ಖಾಲಿ, ಪಶುವೈದ್ಯಕೀಯ ಪರೀಕ್ಷಕರು 7 ಹುದ್ದೆಗಳಲ್ಲಿ 6 ಖಾಲಿ, ಕಿರಿಯ ಪಶುವೈದ್ಯಕೀಯ ಪರೀಕ್ಷಕ-2 ಭರ್ತಿ, ಡಿ-ದರ್ಜೆ 16 ಖಾಲಿ, ದ್ವಿದಸ-1 ಭರ್ತಿ, ವಾಚಮನ್-1 ಖಾಲಿ ಇವೆ.

# ನಮೃತಾ ಆರ್ ಪವಾರ್‌ಗೆ ಪ್ರಶಸ್ತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ದರ್ಶಿನಿ ಕಲಾಯಿ ಕೋಡಂ ಚೆನ್ನೈ, ಡಾ. ಜೆ ಜಯಲಲಿತಾ ಮ್ಯೂಸಿಕ್ ಆ್ಯಂಡ್ ಫೈನ್ ಆರ್ಟ್ ಯೂನಿವರ್ಸಿಟಿ ತಮಿಳುನಾಡು ಇವರ ಸಂಯುಕ್ತಾಶ್ರಯದಲ್ಲಿ ನ್ಯಾಷನಲ್ ಯೂಥ್ ಫೆಸ್ಟಿವಲ್ ನಿಮಿತ್ತ ರಾಜ್ಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಚಿತ್ರಕಲಾ ಸ್ಪರ್ಧೆ ಇತ್ತೀಚೆಗೆ ಜರುಗಿತು.

ಈ ಸ್ಪರ್ಧೆಯಲ್ಲಿ ಗದಗ ಜಿಲ್ಲೆಯ ಎಸ್‌ಎಸ್‌ಕೆ ಶ್ರೀ ಜಗದಂಬಾ ಇಂಗ್ಲಿಷ್ ಮೀಡಿಯಂ ಶಾಲೆಯ ವಿದ್ಯಾರ್ಥಿನಿ ನಮೃತಾ ಆರ್ ಪವಾರ್, 'ಬಿಲ್ಡಿಂಗ್ ಪೊಲುಶನ್' ಎಂಬ



ವಿಷಯ ಪೂರಕ ಚಿತ್ರ ರಚಿಸಿ ಟಾಪ್ ಟೆನ್‌ನಲ್ಲಿ ಆಯ್ಕೆಯಾಗಿ ಕಲಾ ಪದಕ, ಪ್ರಶಸ್ತಿ ಪತ್ರವನ್ನು ಪಡೆದಿದ್ದಾಳೆ. ಇವಳಿಗೆ ಚಿತ್ರಕಲೆ ಮತ್ತು ಕರಕುಶಲ ತರಬೇತಿ ನೀಡಿದ ಕಲಾರತ್ನ ಪ್ರಶಸ್ತಿ ಪುರಸ್ಕೃತ ಡಾ. ಜಾಕೀರಹುಸೇನ್ ಎಂ ಕೊರ್ಲಹಳ್ಳಿಯವರಿಗೆ ಮತ್ತು ಸಾಧನೆ ಮಾಡಿದ ವಿದ್ಯಾರ್ಥಿನಿಗೆ ಶಿಕ್ಷಣ ಸಮಿತಿಯ ಅಧ್ಯಕ್ಷ ಲೋಕನಾಥ್ ಬಿ ಕಬಾಡಿ, ದತ್ತು ಪವಾರ್, ಕಮಿಟಿಯ ಸರ್ವ ಸದಸ್ಯರು, ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಎಸ್ ಡಿ ಬೆಣಕಲ್, ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಸಿ ಎಸ್ ಹವಳದ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

# ಕುಡಿದ ಮತ್ತಿನಲ್ಲಿ ಪತ್ನಿಯ ಕೊಲೆ ಮಾಡಲು ಮುಂದಾದ ಆರೋಪಿಗೆ ಶಿಕ್ಷೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕುಡಿತದ ಅಮಲಿನಲ್ಲಿ ಹೆಂಡತಿಯ ಶೀಲ ಶಂಕಿಸಿ, ಮೈಗೆ ಸೀಮೆ ಎಣ್ಣೆ ಸುರಿದು ಕೊಲೆ ಮಾಡಲು ಯತ್ನಿಸಿದ್ದ ಆರೋಪಿಗೆ ನ್ಯಾಯಾಲಯವು ಶಿಕ್ಷೆ ಹಾಗೂ ದಂಡ ವಿಧಿಸಿ ತೀರ್ಪು ಹೊರಡಿಸಿದೆ.

ಪ್ರಕರಣದ ಆರೋಪಿತನಾದ ಶಿರಹಟ್ಟಿ ತಾಲೂಕಿನ ಗೊಜನೂರಿನ ಗಂಗಪ್ಪ ಮಾದರ ಇವನು ಸುಮಾರು 9 ವರ್ಷಗಳ ಹಿಂದೆ ಚಿನ್ನವ್ವ @ ಸುವರ್ಣ ಗಂಗಪ್ಪ ಮಾದರ ಇವಳನ್ನು ಮದುವೆಯಾಗಿದ್ದ. ಇತ್ತೀಚೆಗೆ, 2-3 ವರ್ಷಗಳಿಂದ ದುಡಿಯಲಾರದೇ ಅತಿಯಾದ ಸಾರಾಯಿ ಕುಡಿದು ತಿರುಗಾಡುತ್ತ, ವಿನಾಕಾರಣ ಹೆಂಡತಿಯ ಶೀಲದ ಬಗ್ಗೆ ಸಂಶಯ ಮಾಡುತ್ತ, ಅವಳಿಗೆ ದೈಹಿಕ ಮತ್ತು ಮಾನಸಿಕ ಕಿರುಕುಳ ಕೊಡುತ್ತಿದ್ದ. ಇದೇ ಕಾರಣದಿಂದ 8-4-2016ರಂದು ಸಂಜೆ 6.30ರ ಸುಮಾರಿಗೆ ಗೊಜನೂರು ಗ್ರಾಮದ ತನ್ನ ಮನೆಯಲ್ಲಿ ಚಿನ್ನವ್ವ @ ಸುವರ್ಣಳಿಗೆ ಅವಾಚ್ಯ ಶಬ್ದಗಳಿಂದ ಬೈದಾಡಿ, ಮನೆಯಲ್ಲಿದ್ದ ಸೀಮೆ ಎಣ್ಣೆಯ ಕ್ಯಾನನ್ನು ತೆಗೆದು-ಕೊಂಡು ಅವಳ ಮೈಮೇಲೆ ಸೀಮೆ ಎಣ್ಣೆ ಸುರಿದು, ಬೆಂಕಿ ಹಚ್ಚಿ ತೀವ್ರವಾಗಿ ಗಾಯಪಡಿಸಿ, ಕೊಲೆಗೆ ಯತ್ನಿಸಿದ್ದ. ಈ ಕುರಿತು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಅಪರಾಧ: 83/16, ಕಲಂ 498(ಎ), 307, 504 ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಪೂರೈಸಿ ನ್ಯಾಯಾಲಯಕ್ಕೆಎ ದೋಷಾರೋಪಣ ಪಟ್ಟಿ ಸಲ್ಲಿಸಲಾಗಿತ್ತು.

ಸಾಕ್ಷಿ ವಿಚಾರಣೆ ನಡೆಸಿದ ಗದುಗಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ಅವರು, ಪ್ರಕರಣದಲ್ಲಿ ಆರೋಪ ಸಾಬೀತಾಗಿದ್ದರಿಂದ, ಅಪರಾಧಿ ಗಂಗಪ್ಪ ಮಾದರ ಈತನಿಗೆ 10 ವರ್ಷ ಶಿಕ್ಷೆ ಹಾಗೂ 15 ಸಾವಿರ ರೂ ದಂಡ ವಿಧಿಸಿ ಜುಲೈ 31ರಂದು ತೀರ್ಪು ನೀಡಿದ್ದಾರೆ.

ಪ್ರಕರಣದಲ್ಲಿ ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕಿ ಸವಿತಾ ಎಂ ಶಿಗ್ಲಿ ಇವರು ಸಾಕ್ಷಿ ವಿಚಾರಣೆ ನಡೆಸಿ ವಾದ ಮಂಡಿಸಿದ್ದರು.

# ಸೆಲ್ಫಿ ತೆಗೆಯುವ ವೇಳೆ ನೀರಿಗೆ ಬಿದ್ದಿದ್ದ ಬೆಂಗಳೂರಿನ ವ್ಯಕ್ತಿಯ ಶವ ಪತ್ತೆ

**■ವಿಜಯಸಾಕ್ಷಿ ಸುದ್ದಿ, ಮಡಿಕೇರಿ**

ಕೊಡಗಿನ ಹಾರಂಗಿ ಜಲಾಶಯದ ಕೆಳಭಾಗದ ಸೇತುವೆ ಮೇಲೆ ನಿಂತು ಸೆಲ್ಫಿ ತೆಗೆದುಕೊಳ್ಳುತ್ತಿದ್ದ ವೇಳೆ ನೀರಿಗೆ ಬಿದ್ದಿದ್ದ ಬೆಂಗಳೂರಿನ ವ್ಯಕ್ತಿಯ ಶವ ಶುಕ್ರವಾರ ಪತ್ತೆಯಾಗಿದೆ.

ಬೆಂಗಳೂರಿನಿಂದ ಕೊಡಗಿಗೆ ಪ್ರವಾಸಕ್ಕೆ ತೆರಳಿದ್ದ ಟ್ಯಾಟೂ ಕಲಾವಿದ ಸಂದೀಪ್(46) ಅವರು ಗುರುವಾರ ಸಂಜೆ ಹಾರಂಗಿ-ಸೋಮವಾರಪೇಟೆ ಸೇತುವೆಯ ಮೇಲೆ ಸೆಲ್ಫಿ ಕ್ಲಿಕ್ಕಿಸಿಕೊಳ್ಳುತ್ತಿದ್ದಾಗ ನೀರಿಗೆ ಬಿದ್ದು ಮೃತಪಟ್ಟಿದ್ದರು.

ಸಂದೀಪ್ ಪತ್ತೆಗಾಗಿ ಗುರುವಾರ ರಾತ್ರಿಯವರೆಗೂ ಶೋಧ ಕಾರ್ಯಾಚರಣೆ ಮುಂದುವರಿದಿತ್ತು. ಇಂದು ಬೆಳಗ್ಗೆ ಮತ್ತೆ ಶೋಧ ಕಾರ್ಯಾಚರಣೆ ಆರಂಭವಾಗಿತ್ತು.

ಕುಶಾಲನಗರ ಪೊಲೀಸರ ಸಹಕಾರದೊಂದಿಗೆ ದುಬಾರೆ ರಾಫ್ಟಿಂಗ್ ತಂಡ ಮತ್ತು ಅಗ್ನಿಶಾಮಕ ದಳದ ಸಿಬ್ಬಂದಿ ಸಂದೀಪ್ ಮೃತದೇಹವನ್ನು ಹೊರ ತೆಗೆದಿದ್ದಾರೆ. ಘಟನೆ ನಡೆದ ಸ್ಥಳದ ಸಮೀಪವೇ ಮೃತದೇಹ ಪತ್ತೆಯಾಗಿದೆ.

ಪ್ರವಾಸಕ್ಕೆ ತೆರಳಿದ್ದ ಸಂದೀಪ್, ಗೋವಿಂದರಾಜು, ರಾಮ್‌ಕುಮಾರ್ ಮತ್ತು ರಂಜಿತ್ ಅವರು ಹಾರಂಗಿ ಸೇತುವೆಯ ಮೇಲೆ ನಿಂತು ಸೆಲ್ಫಿ ತೆಗೆದುಕೊಳ್ಳುತ್ತಿದ್ದರು. ಈ ವೇಳೆ ವೃತ್ತಿಯಲ್ಲಿ ಟ್ಯಾಟೂ ಕಲಾವಿದರಾಗಿರುವ ಸಂದೀಪ್(46) ಅವರು ಸೇತುವೆಯ ಅಂಚಿನಿಂದ ಸೆಲ್ಫಿ ಕ್ಲಿಕ್ಕಿಸಲು ಹೋಗಿ ಜಾರಿ ನೀರಿಗೆ ಬಿದ್ದಿದ್ದರು.

# ಕೋರ್ಟ್ ಆವರಣದಲ್ಲಿಯೇ ನ್ಯಾಯಮೂರ್ತಿ ರಾಜಿನಾಮೆ

**■ವಿಜಯಸಾಕ್ಷಿ ಸುದ್ದಿ, ಮುಂಬೈ**

ಬಾಂಬೆ ಹೈಕೋರ್ಟ್‌ನ ನಾಗ್ಪುರ ಪೀಠದ ನ್ಯಾಯಮೂರ್ತಿ ರೋಹಿತ್ ಬಿ ದೇವ್‌ರವರು ನ್ಯಾಯಾಲಯದ ಆವರಣದಲ್ಲಿಯೇ ರಾಜೀನಾಮೆ ಘೋಷಿಸಿರುವ ಪ್ರಕರಣ ಜರುಗಿದೆ.

ತನಗೆ ಯಾರ ವಿರುದ್ಧವೂ ನಿಷ್ಠುರ ಭಾವನೆ ಇಲ್ಲ ಎಂದ ಅವರು, ಯಾರಿಗಾದರೂ ನೋವಾಗಿದ್ದರೆ ಕ್ಷಮೆ ಇರಲಿ. ನಾನು ನನ್ನ ಸ್ವಾಭಿಮಾನಕ್ಕೆ ವಿರುದ್ಧವಾಗಿ ಕೆಲಸ ಮಾಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

ಹೈಕೋರ್ಟ್‌ನ ನಾಗ್ಪುರ ಪೀಠದ ಹಿರಿಯ ನ್ಯಾಯಾಧೀಶರಾಗಿದ್ದ ಅವರು ಕಳೆದ ವರ್ಷ ಮಾವೋವಾದಿ ಸಂಪರ್ಕ ಪ್ರಕರಣದಲ್ಲಿ ಪ್ರೊಫೆಸರ್ ಜಿಎನ್ ಸಾಯಿಬಾಬಾ ಅವರನ್ನು ಬಿಡುಗಡೆ ತೀರ್ಪು ನೀಡಿದ ಪೀಠದಲ್ಲಿ ಒಬ್ಬರಾಗಿದ್ದರು.

ತೀರಾ ಇತ್ತೀಚೆಗೆ ರೋಹಿತ್ ಬಿ ದೇವ್ ನೇತೃತ್ವದ ಪೀಠವು ಸಮೃದ್ಧಿ ಎಕ್ಸ್‌ಪ್ರೆಸ್‌ವೇ ಯೋಜನೆಯಲ್ಲಿ ಕೆಲಸ ಮಾಡುವ ಗುತ್ತಿಗೆದಾರರ ವಿರುದ್ಧದ ದಂಡನಾತ್ಮಕ ಪ್ರಕ್ರಿಯೆಗಳನ್ನು ರದ್ದುಗೊಳಿಸಲು ಮಹಾರಾಷ್ಟ್ರ ಸರ್ಕಾರಕ್ಕೆ ಅಧಿಕಾರ ನೀಡುವ ಸರ್ಕಾರದ ನಿರ್ಣಯದ ವಿರುದ್ಧ ತೀರ್ಪು ನೀಡಿತ್ತು.

2017 ರಲ್ಲಿ ಜಸ್ಟಿಸ್ ದೇವ್ ಅವರನ್ನು ಹೈಕೋರ್ಟ್ ಪೀಠಕ್ಕೆ ಆಯ್ಕೆ ಮಾಡಲಾಗಿತ್ತು.





ಅವರು ನ್ಯಾಯಾಧೀಶರಾಗಿ ನೇಮಕಗೊಳ್ಳುವ ಮೊದಲು ರಾಜ್ಯದ ಅಡ್ವೊಕೇಟ್ ಜನರಲ್ ಆಗಿದ್ದರು. ಅವರು ಹೈಕೋರ್ಟ್‌ನ ನಾಗ್ಪುರ ಪೀಠದಲ್ಲಿ ಹೆಚ್ಚುವರಿ ಸಾಲಿಸಿಟರ್ ಜನರಲ್ ಆಗಿಯೂ ಸೇವೆ ಸಲ್ಲಿಸಿದ್ದಾರೆ.

ಡಿಸೆಂಬರ್ 4, 2025 ರವರೆಗೂ ಅವರ ಸೇವಾವದಿ ಇದ್ದರೂ ಮುಂಚಿತವಾಗಿ ರಾಜೀನಾಮೆ ನೀಡಿದ್ದಾರೆ.

# ಬಿಸಿಎನ್ ಸಿರಿ ಮಹಾವಿದ್ಯಾಲಯದಲ್ಲಿ ಫನ್ ವೀಕ್

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಆಧುನಿಕ ಜೀವನದ ಭರಾಟೆಯಲ್ಲಿ ಗ್ರಾಮೀಣ ಸಂಸ್ಕೃತಿಯನ್ನು ನೆನಪಿಸುವ ಜೊತೆಗೆ, ಉಳಿಸಿ ಬೆಳೆಸುವ ಮನಸ್ಥಿತಿ ಇನ್ನೂ ಯುವ ಜನಾಂಗದಲ್ಲಿ ಇದೆ ಎನ್ನುವುದಕ್ಕೆ ಬಿಸಿಎನ್ ವಿದ್ಯಾಸಂಸ್ಥೆಯ ಬಿಸಿಎನ್ ಸಿರಿ ಪದವಿ ಮಹಾವಿದ್ಯಾಲಯದಲ್ಲಿ ಸೋಮವಾರದಿಂದ ಆಚರಿಸಲಾಗುತ್ತಿರುವ ಫನ್ ವೀಕ್ ಕಾರ್ಯಕ್ರಮ ಸಾಕ್ಷಿಯಾಯಿತು.

ಕಾರ್ಯಕ್ರಮದ ಮೂಲಕ ಕಾಲೇಜು ವಿದ್ಯಾರ್ಥಿಗಳು ವಾರಪೂರ್ತಿ ಬಗೆ ಬಗೆಯ ವೇಷಭೂಷಣಗಳನ್ನು ತೊಟ್ಟು,



ಪ್ರತಿದಿನ ವಿಶೇಷವಾಗಿ ಕಾಣಿಸಿಕೊಂಡು ಸಂಭ್ರಮಿಸಿದರು. ವಾರವಿಡೀ ತಮ್ಮ ಅಭ್ಯಾಸದೊಂದಿಗೆ ವಿವಿಧ ಆಚರಣೆಗಳು ಗಮನ ಸೆಳೆದವು. ಅಪ್ಪಟ ಹಳ್ಳಿ ಜೀವನ ಶೈಲಿಯ ಕಾಟನ್ ಸೀರೆಗಳನ್ನು ಉಟ್ಟುಕೊಂಡು ಬಂದಿದ್ದ ವಿದ್ಯಾರ್ಥಿನಿಯರು ವಿವಿಧ ವಿನೋದಾವಳಿಗಳನ್ನು ನಡೆಸಿ ಸಂತಸಪಟ್ಟರು. ಈ ಸಂದರ್ಭದಲ್ಲಿ ಬಿಸಿಎನ್ ಸಿರಿ ವಿಜ್ಞಾನ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ವಿಜಯಕುಮಾರ, ಉಪನ್ಯಾಸಕರಾದ ಖುಷಾ ಅರಳಿ, ಪ್ರೀತಿ ಕಬ್ಬೂರ, ಅಜಮೀರ್ ಹಾರೋಗೇರಿ, ಮಂಜುನಾಥ ಬಂಡಿವಾಡ ಮುಂತಾದವರಿದ್ದರು.

# ಸಂತೋಷ ಘೋರ್ಪಡೆಯವರಿಗೆ ಪಿಎಚ್‌ಡಿ ಪದವಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸಂತೋಷ ಪಾಂಡುರಂಗ ಘೋರ್ಪಡೆ ಅವರಿಗೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಲ್ಲಿ ಮಂಗಳವಾರ ನಡೆದ 23ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪಿಎಚ್‌ಡಿ ಪ್ರದಾನ ಮಾಡಲಾಯಿತು.

'ಡಿಸ್ಟೈನ್, ಲುಮಿನೆಸ್ಸನ್ಸ್ ಅಂಡ್ ರಾಮನ್ ಸ್ಟಡೀಸ್ ಅಪ್ ಸಂ ನಾನೊಫೋಸ್ಫೋರಸ್' ಎಂಬ ಪ್ರಬಂಧಕ್ಕೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಪಿಎಚ್‌ಡಿ ಪದವಿ ನೀಡಿದೆ. ಹುಬ್ಬಳ್ಳಿಯ ಬಿವಿಬಿ ಇಂಜಿನಿಯರಿಂಗ್ ಕಾಲೇಜಿನ



ಇಂಜಿನಿಯರಿಂಗ್ ಭೌತಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಎನ್ ಆರ್ ಪಾಟೀಲ ಮಾರ್ಗದರ್ಶನ ನೀಡಿದ್ದರು.

# ಕಳಪೆ ಕಾಮಗಾರಿ ದೂರು: ಶಾಸಕ ಡಾ. ಲಮಾಣಿ ಪರಿಶೀಲನೆ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹೊಸ ಬಸ್‌ಸ್ಟ್ಯಾಂಡ್ ಹತ್ತಿರದ ಕೈಗಾ-ಇಳಕಲ್ ರಾಜ್ಯ ಹೆದ್ದಾರಿಯ ಸಿಸಿ ರಸ್ತೆ ಕಾಮಗಾರಿ ಮತ್ತು ಅಳವಡಿಸಿರುವ ಡಿವೈಡರ್ ಕಾಮಗಾರಿ ಕಳಪೆಯಾಗಿದೆ ಎಂಬ ಸಾರ್ವಜನಿಕರ, ಸಂಘಟನೆಗಳ ದೂರಿನ ಹಿನ್ನಲೆಯಲ್ಲಿ ಶುಕ್ರವಾರ ಬೆಳಿಗ್ಗೆ ಶಾಸಕ ಡಾ.ಚಂದ್ರು ಲಮಾಣಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಸದಾನಂದ ನಂದೆಣ್ಣವರ, ರಮೇಶ ಲಮಾಣಿ, ಸಂತೋಷ ರಾಠೋಡ ಮುಂತಾದವರು ಶಾಸಕರೊಂದಿಗೆ ಮಾತನಾಡಿ, ಈಗಾಗಲೇ ಮುಗಿದಿರುವ ಸಿಸಿ ರಸ್ತೆ ಮತ್ತು ಡಿವೈಡರ್ ಕಾಮಗಾರಿ ಸಹ ಕಳಪೆಯಾಗಿದೆ. ಇಷ್ಟಾಗಿಯೂ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಕಾಮಗಾರಿ ಸ್ಥಳಕ್ಕೆ ಒಮ್ಮೆಯೂ ಭೇಟಿ ನೀಡಿಲ್ಲ. ಕೋಟ್ಯಾಂತರ ರೂ ಕಾಮಗಾರಿ ಕಳಪೆಯಾಗಿದ್ದು ಸರಿಪಡಿಸುವಂತೆ ಆಗ್ರಹಿಸಿದರು.

ಶಾಸಕ ಡಾ.ಚಂದ್ರು ಲಮಾಣಿ ಮಾತನಾಡಿ, ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಎಲ್ಲ ಕಾಮಗಾರಿಗಳು ಗುಣಮಟ್ಟದಿಂದ ನಡೆಯಬೇಕು. ಟೆಂಡರ್‌ನಲ್ಲಿ ಇರುವಂತೆ ಕಾಮಗಾರಿ ನಡೆಯಬೇಕು. ಇಲ್ಲದೆ ಇದ್ದಲ್ಲಿ ಯಾರೇ ಇದ್ದರೂ ಮುಲಾಜಿಲ್ಲದೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಇಲಾಖೆಯವರಿಗೆ ಸೂಚಿಸುತ್ತೇನೆ. ಇಲ್ಲಿ ನಡೆದಿರುವ ಕಾಮಗಾರಿ ಕಳಪೆ ಎನ್ನುವಂತೆ ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದು ತಿಳಿಸಿ, ಸಂಬಂಧಿಸಿದ ಗುತ್ತಿಗೆದಾರರಿಗೆ ಗುಣಮಟ್ಟದ ಕಾಮಗಾರಿ ನಡೆಸುವಂತೆ ತಾಕೀತು ಮಾಡಿದರು. ಈ ವೇಳೆ ಪ್ರಕಾಶ ಕೊಂಚಿಗೇರಿಮಠ, ಕುಮಾರ ಬೆಟಗೇರಿ, ಗಣೇಶ ಮೆಹರವಾಡೆ, ಶಂಕರಗೌಡ ಪಾಟೀಲ ಹಾಗೂ ಸಾರ್ವಜನಿಕರು ಇದ್ದರು.

ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳ ಅಭಿಮತ

# ಜಯದೇವಿ ಲಿಗಾಡೆಯವರ ಸಾಧನೆ-ಸಿದ್ಧಿಗಳು ಅವಿಸ್ಮರಣೀಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ನಾಡು-ನುಡಿಗೆ ವಿಶೇಷ ಕೊಡುಗೆ ನೀಡಿದವರಲ್ಲಿ ಜಯದೇವಿ ತಾಯಿ ಲಿಗಾಡೆಯವರು ಒಬ್ಬರು. ಕನ್ನಡಿಗರ ಮನದಲ್ಲಿ ಅಚ್ಚಳಿಯದೇ ಉಳಿದಿದ್ದಾರೆ. ಅವರ ಆದರ್ಶ ಬದುಕು, ಸಾಧನೆ-ಸಿದ್ಧಿಗಳು ಅವಿಸ್ಮರಣೀಯ ಎಂದು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರು ಅಭಿಪ್ರಾಯಪಟ್ಟರು.

ಲಿಂಗಾಯತ ಪ್ರಗತಿಶೀಲ ಸಂಘದ 2652ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಗೌರಕ್ಕ ಬಡಿಗಣ್ಣನವರ ಉಪನ್ಯಾಸ ನೀಡಿ, ಜಯದೇವಿ ತಾಯಿ ಲಿಗಾಡೆಯವರು ಬಾಲ್ಯದಿಂದಲೂ ವಚನ ಸಾಹಿತ್ಯದ ಪ್ರಭಾವಕ್ಕೆ ಒಳಗಾದವರು. ಕನ್ನಡ ನಾಡು-ನುಡಿಗೆ ಸಂಕಷ್ಟಗಳು ಎದುರಾದಾಗ ಜನರಲ್ಲಿ ಜಾಗೃತಿ ಮೂಡಿಸುತ್ತಾ ಬಂದಿದ್ದಾರೆ. ಅವರ ಸಮಾಜಮುಖಿ ಬದುಕು ನಮಗೆಲ್ಲ ಮಾದರಿಯಾಗಿದೆ ಎಂದು ತಿಳಿಸಿದರು.



> ಜಯದೇವಿ ತಾಯಿ ಲಿಗಾಡೆಯವರು ಮರಾಠಿಯಲ್ಲಿ ಶಿಕ್ಷಣ ಪಡೆದಿದ್ದರೂ ಕನ್ನಡ ಭಾಷೆಯ ಬಗ್ಗೆ ಅಪಾರ ಅಭಿಮಾನ ಹೊಂದಿದ್ದರು. ಕರ್ನಾಟಕದಲ್ಲಿ ಮೊಟ್ಟಮೊದಲು ಉದಯಿಸಿದ ಏಕೈಕ ಧರ್ಮ ಲಿಂಗಾಯತ ಧರ್ಮ. ಇದು ಶರಣ ಸಂಸ್ಕೃತಿಯ ಧರ್ಮ. ಇಂತಹ ಶ್ರೇಷ್ಠ ಧರ್ಮದ ಪ್ರಭಾವಕ್ಕೆ ಒಳಗಾಗಿ ಜೀವನದುದ್ದಕ್ಕೂ ಶರಣಜೀವಿಯಾಗಿ ಬಾಳಿ-ಬದುಕಿದವರು ಜಯದೇವಿ ತಾಯಿಯವರು. ಸ್ವತಃ ಪುರಾಣಕಾವ್ಯ ಮತ್ತು ಕೃತಿಗಳನ್ನು ರಚಿಸಿದ್ದಾರೆ. ಅವರು ಸಮಾಜಕ್ಕೆ ಸಲ್ಲಿಸಿದ ಸೇವೆ, ಕೊಡುಗೆ ಅನನ್ಯ.
>
> **– ಡಾ. ತೋಂಟದ ಸಿದ್ಧರಾಮ ಶ್ರೀಗಳು.**

ಕುವೆಂಪು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದ ನಿಮಿತ್ಯ ಶರಣ ಡಾ. ರಾಜಗುರು ಗುರುಸ್ವಾಮಿ ಕಲಕೇರಿ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾಗಿ ನಿವೃತ್ತಿ ಹೊಂದಿದ ನಿಮಿತ್ತ ಜಿ ಎಂ ಬಸವಲಿಂಗಪ್ಪ, ರಾಜ್ಯ ಶ್ರೇಷ್ಠ ರಫ್ತು ಪ್ರಶಸ್ತಿಗೆ ಭಾಜನರಾದ ನಿಮಿತ್ತ ಶರಣು ಪ್ಥಿ ಗದಗ ಅವರನ್ನು ಸನ್ಮಾನಿಸಲಾಯಿತು.

ಅನರ್ಘ್ಯ ಸಂಗೀತ ಪಾಠಶಾಲೆಯ ಮಕ್ಕಳು ಮತ್ತು ತೋಟಪ್ಪ ಉತ್ತಂಗಿಯವರು ವಚನ ಸಂಗೀತ ಹಾಡಿದರು. ವೀರೇಶ ಎಸ್ ಮದ್ದಿ ಧರ್ಮಗ್ರಂಥ ಪಠಣಗೈದರು. ಸಮೀರ್ ಎನ್ ಹಂಪಸಾಗರ ಇವರಿಂದ ವಚನ ಚಿಂತನ ನಡೆಯಿತು. ಶಿವಾನುಭವ ಭಕ್ತಿಸೇವೆಯನ್ನು ವಹಿಸಿದ್ದ ರಾಜೇಶ ಹಾಗೂ ಗಿರೀಶ ಮಾನ್ವಿ ಪರಿವಾರ ಇವರನ್ನು ಶ್ರೀಗಳು ಸನ್ಮಾನಿಸಿದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ. ಕರೇಗೌಡ್ರ ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka